ನಿಮ್ಮ ನಂಬಿಕೆಯ ಧ್ವನಿ
# ಧೈರ್ಯದ ದಾರಿ
EMAIL : dairyadadaari@gmail.com ಸಂಪುಟ: 01 ಸಂಚಿಕೆ: 122
ಬೆಲೆ ರೂ : 2.00
ರಾಯಚೂರು
ಪುಟ: 4
ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ
Cell : 6360866626, 9036887793
KANNADA DAILY NEWS PAPER
ಕನ್ನಡ ದಿನಪತ್ರಿಕೆ
DAIRYADA DAARI
RNI NO: KNKAN/25/A2795
ಭಾನುವಾರ: 19–04–2026

## ಬೇಸಿಗೆ ಎಚ್ಚರಿಕೆ: ಕುಡಿಯುವ ನೀರಿಗೆ ಕಡ್ಡಾಯ ಪರೀಕ್ಷೆ

### ಕಲುಷಿತ ನೀರಿನಿಂದ ರೋಗ ಭೀತಿ : ಕ್ಲೋರಿನೇಷನ್ ಕ್ರಮಕ್ಕೆ ಒತ್ತು : 40ಲಿ ಸೆ. ತಾಪಮಾನ ಎಚ್ಚರಿಕೆ

ಧೈರ್ಯದ ದಾರಿ

**ರಾಯಚೂರು:** ಬೇಸಿಗೆ ಶುರುವಾಗಿದ್ದು, ಜಿಲ್ಲೆಯ ಎಲ್ಲ ಗ್ರಾಮ ಪಂಚಾಯತ್ ಹಾಗೂ ಸ್ಥಳೀಯ ಸಂಸ್ಥೆಗಳಲ್ಲಿ ಕುಡಿಯುವ ನೀರಿನ ಪರೀಕ್ಷೆಯನ್ನು ಕಡ್ಡಾಯವಾಗಿ ಮಾಡಬೇಕೆಂದು ಪ್ರಭಾರ ಜಿಲ್ಲಾಧಿಕಾರಿ ಆಗಿರುವ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗ ಈಶ್ವರ ಕುಮಾರ ಕಾಂದೂ ಅವರು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಏಪ್ರಿಲ್ 17ರ ಶುಕ್ರವಾರ ದಂದು ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ತುಂಗಾ ಸಭಾಂಗಣದಲ್ಲಿ ಜಿಲ್ಲಾ ಆರೋಗ್ಯ ಸಂಘದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಲುಷಿತ ನೀರಿನಿಂದ ಹಲವು ಪ್ರಕರಣಗಳು ವರದಿಯಾಗುವ ಸಾಧ್ಯತೆ ಇರುವ ಹಿನ್ನೆಲೆಯಲ್ಲಿ ನೀರಿನ ಪರೀಕ್ಷೆಯನ್ನು ಕಡ್ಡಾಯಗೊಳಿಸಬೇಕು. ಜಿಲ್ಲೆಯ ಎಲ್ಲ ಗ್ರಾಮ ಪಂಚಾಯಿತಿಗಳಲ್ಲಿ ಹೈಡ್ರೋಜನ್ ಕ್ಲೋರೈಡ್, ಫ್ಲೋರೈಡ್, ಐರನ್, ನೈಟ್ರೇಟ್, ಅಲ್ಕಲೈನಿಟಿ, ಕ್ಲೋರಿನಿ ಹಾಗೂ ಒಟ್ಟು ಕರಗಿದ ಘನವಸ್ತುಗಳ ಸಾಮರ್ಥ್ಯ, ಬ್ಯಾಕ್ಟೀರಿಯಾ ಹಾಗೂ ಹೈಡ್ರೋಜನ್ ಸಲ್ಫೈಡ್ ಪರೀಕ್ಷೆಯನ್ನೂ ಕೂಡ ನಡೆಸಬೇಕೆಂದರು.

ಪ್ರಸ್ತುತ ಹವಮಾನ ಬದಲಾವಣೆ ಹಾಗೂ ಪ್ರಖರ ಬಿಸಿಲಿನ ತಾಪಮಾನದಿಂದ ಪ್ರತಿಯೊಬ್ಬರ ಸುರಕ್ಷತೆಗಾಗಿ ನಿರಂತರ ಜಾಗೃತಿ, ಮತ್ತು ಎಲ್ಲ ಕುಡಿಯುವ ನೀರಿನ ಮೂಲಗಳು ಕುಡಿಯಲು ಯೋಗ್ಯವಾಗಿವೆ ಎಂಬುದನ್ನು ಖಚಿತಪಡಿಸಿಕೊಳ್ಳಬೇಕು. 40 ಡಿಗ್ರಿಗಿಂತ ಹೆಚ್ಚು ಇರುವ ತಾಪಮಾನ, ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಾಗುವ ಸಾಧ್ಯತೆ ಇದ್ದು, ನವಜಾತ ಶಿಶು ಹಾಗೂ ಚಿಕ್ಕ ಮಕ್ಕಳು ಗರ್ಭಿಣಿ, ಬಾಣಂತಿ, ಸೇರಿದಂತೆ ವಯೋವೃದ್ದರು, ಧೀರ್ಘಕಾಲದಿಂದ ಖಾಯಿಲೆಗಳಿಂದ ಬಳಲುವವರು, ಹೊರ ಆವರಣದಲ್ಲಿ ದೈಹಿಕವಾಗಿ ದಿನನಿತ್ಯ ಕೆಲಸ ಮಾಡುವ ಕೂಲಿ ಕಾರ್ಮಿಕರು, ಕಟ್ಟಡ ಕಾರ್ಮಿಕರು, ಮುಂತಾದವರಿಗೆ ಹೆಚ್ಚು ಜೋಪಾನ ಮಾಡಲು ಮಧ್ಯಾನ್ಹ 12 ಗಂಟೆಯಿಂದ 4 ಗಂಟೆಯವರೆಗೆ ಮನೆಯಲ್ಲಿ ಇರುವಂತೆ, ಅಗತ್ಯ ಸಂದರ್ಭದಲ್ಲಿ ಮನೆ ಹೊರಗೆ ಬರುವಾಗ, ಹತ್ತಿ ಉಡುಪು ಬಳಕೆ, ಛತ್ರಿ, ಕುಡಿಯುವ ನೀರು ಇರುವಂತೆ ಸಾರ್ವಜನಿಕರಿಗೆ ಗುಂಪು ಸಭೆ, ಸಾಮಾಜಿಕ ಜಾಲತಾಣಗಳ ಮೂಲಕ ಜಾಗೃತಿ ಹಾಗೂ ತುರ್ತು ಸಂದರ್ಭ ಎದುರಿಸಲು ತಾಲೂಕಾ ಆಸ್ಪತ್ರೆಗಳಲ್ಲಿ 5 ಐಸಿಯು ಬೆಡ್‌ಗಳ ವಾರ್ಡ್ ಸಿದ್ದಪಡಿಸಬೇಕೆಂದರು ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.




**ಸುರಕ್ಷಿತ ಆಹಾರ ಸೇವನೆಗೆ ಜಾಗೃತಿ :** ಬೇಸಿಗೆ ಹಿನ್ನಲೆಯಲ್ಲಿ ನೀರಿನ ಮೂಲಗಳನ್ನು ನಿಯಮಿತವಾಗಿ ಪರೀಕ್ಷೆ ಹಾಗೂ ಅಸುರಕ್ಷಿತವೆಂದು ಕಂಡು ಬರುವ ಮೂಲಗಳನ್ನು ನಿಯಮಾನುಸಾರ ಕ್ಲೋರಿನೆಷನ್ ಮಾಡಿಸಲು ಎಲ್ಲ ಗ್ರಾಮ ಪಂಚಾಯತಗಳು, ಸ್ಥಳೀಯ ಸಂಸ್ಥೆಗಳೊಂದಿಗೆ ಸಮನ್ವಯದಿಂದ ಕಾರ್ಯನಿರ್ವಹಿಸಿ ಯಾವುದೇ ಅವಘಡ ಸಂಭವಿಸಿದಂತೆ ಹಾಗೂ ಮುಂಜಾಗೃತಾ ಕ್ರಮಗಳ ಬಗ್ಗೆ ಜನಜಾಗೃತಿ ನೀಡಲು ಹಾಗೂ ಊಟದ ಮೊದಲು ಶೌಚದ ನಂತರ ಕೈಗಳನ್ನು ಸಾಬೂನು ಮತ್ತು ನೀರಿನಿಂದ 45 ಸೆಕೆಂಡ್‌ಗಳ ಕಾಲ ತೊಳೆದ ನಂತರ ಆಹಾರ ಸೇವನೆ ಬಗ್ಗೆ ಮಲ, ಮೂತ್ರ ವಿಸರ್ಜನೆಗಾಗಿ ಶೌಚಾಲಯ ಬಳಸಲು ವ್ಯಾಪಕ ಪ್ರಚಾರ ಕೈಗೊಳ್ಳಬೇಕೆಂದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಸುರೇಂದ್ರ ಬಾಬು ಅವರು ಮಾತನಾಡಿ, ಈಗಾಗಲೇ ಎಲ್ಲ ಆರೋಗ್ಯ ಕೇಂದ್ರಗಳಲ್ಲಿ ಓಆರ್‌ಎಸ್ ಪ್ಯಾಕೆಟ್ ಹಾಗೂ ತುರ್ತು ಔಷಧಿಗಳನ್ನು ದಾಸ್ತಾನು ಮಾಡಲಾಗಿದೆ. ತುರ್ತು ಸಂದರ್ಭದಲ್ಲಿ 108ಕ್ಕೆ ಕರೆ ಮಾಡಿ ಅಂಬ್ಯುಲೆನ್ಸ ಸದುಪಯೋಗಕ್ಕಾಗಿ ನಿರಂತರ ಜಾಗೃತಿ ನೀಡಲಾಗುತ್ತಿದೆ ಎಂದರು. ಸಭೆಯಲ್ಲಿ ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ವಿಜಯ ಶಂಕರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕ ನವೀನ್‌ಕುಮಾರ್, ಆರ್‌ಸಿಹೆಚ್ ಅಧಿಕಾರಿ ಡಾ.ನಂದಿತಾ ಎಮ್.ಎನ್., ಜಿಲ್ಲಾ ಆಯುಷ್ ಅಧಿಕಾರಿ ಡಾ.ಶಂಕರ್‌ಗೌಡ, ಡಿಪಿಡಿಓ ಡಾ.ಚಂದ್ರಶೇಖರಯ್ಯ ಸ್ವಾಮಿ, ಡಿಎಸ್‌ಓ ಹಾಗೂ ಡಿಪಿಎವ್‌ಓ ಡಾ.ಗಣೇಶ್ ಕೆ., ಎನ್‌ಫೋರ್ಸ್‌ಮೆಂಟ್ ಅಧಿಕಾರಿ ಡಾ.ಶಿವಕುಮಾರ್ ನಾರಾ, ಡಿಟಿಓ ಡಾ.ಮಹಮ್ಮದ್ ಶಾಕೀರ್ ಮೊಹಿಯುದ್ದೀನ್, ನಿರೂಪಣಾಧಿಕಾರಿ ಡಾ.ಕುಮಾರ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು ಸಭೆಯಲ್ಲಿ ಇದ್ದರು.

## ಕಾಂಗ್ರೆಸ್ ವಿರುದ್ಧ ಎಚ್‌ಡಿಕೆ ವಾಗ್ದಾಳಿ



**ಬೆಂಗಳೂರು, ಏ.18–** ಲೋಕಸಭೆಯಲ್ಲಿ ಮಹಿಳಾ ಮೀಸಲಿಗೆ ಸೋಲುಂಟಾಗಿದ್ದಕ್ಕೆ ಕಾಂಗ್ರೆಸ್ ವಿರುದ್ಧ ಕೇಂದ್ರ ಆಕ್ರೋಶ ವ್ಯಕ್ತಪಡಿಸಿರುವ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ, ಕಾಂಗ್ರೆಸ್‌ನ ಮಹಿಳಾ ವಿರೋಧಿ ಮನಸ್ಥಿತಿ ಬದಲಾಗಿಲ್ಲ ಎಂದು ವಾಗ್ದಾಳಿ ನಡೆಸಿದ್ದಾರೆ.

**1996 ಮತ್ತು 2026;** ಕರಾಳ ಇತಿಹಾಸ ಮರುಕಳಿಸಿದೆ. ಮೂರು ದಶಕಗಳ ನಂತರವೂ ಕಾಂಗ್ರೆಸ್ ಪಕ್ಷದ ಮಹಿಳಾ ವಿರೋಧಿ ಮನಸ್ಥಿತಿ ಕೊಂಚವೂ ಬದಲಾಗಿಲ್ಲ ಎನ್ನುವುದಕ್ಕೆ ಲೋಕಸಭೆ ಮತ್ತೊಮ್ಮೆ ಸಾಕ್ಷಿಯಾಯಿತು ಎಂದು ತಮ್ಮ ಎಕ್ಸ್ ಖಾತೆಯಲ್ಲಿ ಅಸಮಾಧಾನ ಹೊರಹಾಕಿದ್ದಾರೆ.

ಹೆಚ್.ಡಿ.ದೇವೇಗೌಡ ಅವರ ನೇತೃತ್ವದ ಸಂಯುಕ್ತ ರಂಗ ಸರ್ಕಾರವು ಲೋಕಸಭೆ, ವಿಧಾನಸಭೆಗಳಲ್ಲಿ ಮಹಿಳೆಯರಿಗೆ 33% ಮೀಸಲು ನೀಡುವ ಕ್ರಾಂತಿಕಾರಿ ನಿರ್ಧಾರ ಕೈಗೊಂಡು ಸಂಸತ್ತಿನಲ್ಲಿ ಮಸೂದೆ ಮಂಡಿಸಿತ್ತು. ಅಂದು ಇದೇ ಕಾಂಗ್ರೆಸ್ ಮತ್ತು ಅದರ ಸಹಚರ ಶಕ್ತಿಗಳು ಆ ಪ್ರಯತ್ನವನ್ನು ಸಂಘಟಿತವಾಗಿ ವಿಫಲಗೊಳಿಸಿದ್ದವು.

ಇಂದು ಮಹಿಳೆಯರಿಗೆ ಆಗಿದ್ದ ಐತಿಹಾಸಿಕ ಅನ್ಯಾಯ ಸರಿಪಡಿಸಲು ಗೌರವಾನ್ವಿತ ಪ್ರಧಾನಿಗಳಾದ ನರೇಂದ್ರ ಮೋದಿ ಅವರು ದಿಟ್ಟಹೆಜ್ಜೆ ಇರಿಸಿದ್ದರು. ಪುನಾ 2ನೇಪುಟಕ್ಕೆ

## ಜಾನುವಾರುಗಳಿಗೆ ಲಸಿಕೆ ಹಾಕುವ ಕಾರ್ಯಕ್ರಮ ಯಶಸ್ವಿಗೊಳಿಸಿ: ಎಡಿಸಿ ಶಿವಾನಂದ




ಧೈರ್ಯದ ದಾರಿ

**ರಾಯಚೂರು :**ಪಶುಪಾಲನೆ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯಿಂದ ಜಿಲ್ಲೆಯಲ್ಲಿ ಏಪ್ರಿಲ್ 23 ರಿಂದ ಮೇ.22ರವರೆಗೆ ಎಲ್ಲ ದನ ಹಾಗೂ ಎಮ್ಮೆಗಳಿಗೆ ಕಾಲುಬಾಯಿ ಜ್ವರ ಲಸಿಕೆ ಹಾಕುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ರೈತರು ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಅಪರ ಜಿಲ್ಲಾಧಿಕಾರಿ ಶಿವಾನಂದ ಅವರು ಹೇಳಿದರು.

ಏಪ್ರಿಲ್ 18ರ ಶನಿವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಕೇಂದ್ರ ಪುರಸ್ಕೃತ ರಾಷ್ಟ್ರೀಯ ಕಾಲುಬಾಯಿ ರೋಗ ನಿಯಂತ್ರಣ ಕಾರ್ಯಕ್ರಮದ 9ನೇ ಜಿಲ್ಲಾ ಮೇಲುಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ರಾಜ್ಯ ಕಾಲುಬಾಯಿ ರೋಗ ನಿಯಂತ್ರಣ ಕಾರ್ಯಕ್ರಮದ ಮೇಲುಸ್ತುವಾರಿ ಸಮಿತಿಯ ಸೂಚನೆಯಂತೆ ಏಪ್ರಿಲ್ 23 ರಿಂದ ಮೇ 22ರವರೆಗೆ 9ನೇ ಸುತ್ತಿನ ಕಾಲುಬಾಯಿ ಜ್ವರ ಲಸಿಕೆ ಕಾರ್ಯಕ್ರಮವನ್ನು ಜಿಲ್ಲೆಯ ಎಲ್ಲಾ ದನ ಹಾಗೂ ಎಮ್ಮೆಗಳಿಗೆ ಹಾಕುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು. ಈ ಕಾರ್ಯಕ್ರಮದಡಿ ರೈತರ ಮನೆ ಬಾಗಿಲಲ್ಲಿ ದನ ಮತ್ತು ಎಮ್ಮೆಗಳಿಗೆ ಕಾಲುಬಾಯಿ ಬೇನೆ ಲಸಿಕೆ ಹಾಕಲಾಗುವುದು. ಈ ಕಾರ್ಯಕ್ಕಾಗಿ ಜಿಲ್ಲೆಯಲ್ಲಿ 29 ತಂಡಗಳನ್ನು ರಚಿಸಿದ್ದು, ಪ್ರತಿ ತಂಡದಲ್ಲಿ 1 ಮೇಲ್ವಿಚಾರಕರು ಹಾಗೂ 2 ಲಸಿಕದಾರರು ಇರುತ್ತಾರೆ. ಜಿಲ್ಲೆಯಲ್ಲಿರುವ 315280 ದನಗಳು ಹಾಗೂ 231927 ಎಮ್ಮೆಗಳನ್ನು ಲಸಿಕಾಕರಣಕ್ಕೆ ಒಳಪಡಿಸಲಾಗುವುದು. ಜಿಲ್ಲೆಯಲ್ಲಿ ಪ್ರತಿ 120 ಜಾನುವಾರಗಳಿಗೆ ಒಂದು ಬ್ಲಾಕ್ ಮಾಡಲಾಗಿದೆ ಎಂದರು.

ಲಸಿಕಾ ಅಭಿಯಾನದ ನಂತರ ಅಭಿಯಾನದಲ್ಲಿ ಬಿಟ್ಟು ಹೋಗಿರುವ ಜಾನುವಾರುಗಳಿಗೆ ಲಸಿಕೆ ಹಾಕಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಅವರು ತಿಳಿಸಿದರು.

ಜಿಲ್ಲೆಯ ದನ, ಎಮ್ಮೆಗಳು ಕಾಲುಬಾಯಿ ಬೇನೆ ಮುಕ್ತವಾದಲ್ಲಿ ಜಾನುವಾರುಗಳ ಉತ್ಪನ್ನಗಳನ್ನು ಹೆಚ್ಚಿಸಿ, 2ನೇಪುಟಕ್ಕೆ

## ಜೆಡಿಎಸ್ ಪಕ್ಷದ ಕಾರ್ಯಕರ್ತನ ಅಸಮಾಧಾನ ಪರಶುರಾಮ್ ಬಾಗಲವಾಡ ರಾಜೀನಾಮೆ

ಧೈರ್ಯದ ದಾರಿ



**ಮಾನ್ವಿ:** ತಾಲ್ಲೂಕಿನ ಜೆಡಿಎಸ್ ಪಕ್ಷದ ನಿಷ್ಠಾವಂತ ಹಾಗೂ ಸಕ್ರಿಯ ಕಾರ್ಯಕರ್ತರಾಗಿದ್ದ ಪರಶುರಾಮ್ ಬಾಗಲವಾಡ ಅವರು ಪಕ್ಷದ ಪ್ರಾಥಮಿಕ ಸದಸ್ಯತ್ವಕ್ಕೆ ರಾಜೀನಾಮೆ ನೀಡುವ ಮೂಲಕ ಜೆಡಿಎಸ್ ಬಿಗ್ ಶಾಕ್ ನೀಡಿದ್ದಾರೆ.

ಕಳೆದ ಮೂರು ವರ್ಷಗಳಿಂದ ಮಾನ್ವಿ ವಿಧಾನಸಭಾ ಕ್ಷೇತ್ರದಲ್ಲಿ ಪಕ್ಷದ ಸಂಘಟನೆಗಾಗಿ ಅವಿರತವಾಗಿ ದುಡಿದು ಸುಮಾರು 15 ವರ್ಷ ನಿಸ್ವಾರ್ಥವಾಗಿ ರಾಜಾ ವೆಂಕಟಪ್ಪ ನಾಯಕರು ಶಾಸಕರಾಗುವಲ್ಲಿ ಶ್ರಮಿಸಿದ್ದಾರೆ, ಇತ್ತೀಚಿನ ದಿನಗಳಲ್ಲಿ ಪಕ್ಷದೊಳಗಿನ ಕೆಲವು ನಾಯಕರ ನಡೆ ಹಾಗೂ ಸಿದ್ಧಾಂತಗಳಲ್ಲಿನ ಬದಲಾವಣೆಗಳಿಂದ ಬೇಸತ್ತು ಈ ತೀರ್ಮಾನ ಕೈಗೊಂಡಿದ್ದಾರೆ ಎಂದು ತಿಳಿದುಬಂದಿದೆ.

**ನಿಸ್ವಾರ್ಥ ಸೇವೆಗೆ ಬೆಲೆ ಇಲ್ಲ:** ರಾಜೀನಾಮೆ ಕುರಿತು ಮಾತನಾಡಿದ ಪರಶುರಾಮ್ ಬಾಗಲವಾಡ ಅವರು, "ಪಕ್ಷದ ಸಂಕಷ್ಟದ ಸಮಯದಲ್ಲಿ ನಿಷ್ಠೆಯಿಂದ ಕೆಲಸ ಮಾಡಿದ್ದೇನೆ. ಆದರೆ ಪ್ರಸ್ತುತ ಪಕ್ಷದೊಳಗೆ ಉಂಟಾಗಿರುವ ಕೆಲವು ಆಂತರಿಕ ಮನಸ್ತಾಪಗಳು ಹಾಗೂ ಕಾರ್ಯಕರ್ತರನ್ನು ಕಡೆಗಣಿಸುವ ಧೋರಣೆಯಿಂದಾಗಿ ನನಗೆ ತುಂಬಾ ನೋವುಂಟಾಗಿದೆ. ಸ್ವಾಭಿಮಾನಕ್ಕೆ ಧಕ್ಕೆಯಾದ ಕಡೆ ಇರುವುದು ಸರಿಯಲ್ಲ ಎಂದು ಭಾವಿಸಿ ಸ್ವಇಚ್ಛೆಯಿಂದ ರಾಜೀನಾಮೆ ನೀಡುತ್ತಿದ್ದೇನೆ," ಎಂದು ತಮ್ಮ ಅಳಲು ತೋಡಿಕೊಂಡಿದ್ದಾರೆ.

ಮಾನ್ವಿ ಭಾಗದಲ್ಲಿ ಸಕ್ರಿಯವಾಗಿ ಗುರುತಿಸಿಕೊಂಡಿದ್ದ ಇವರ ನಿರ್ಗಮನವು ಸ್ಥಳೀಯ ಜೆಡಿಎಸ್ ವಲಯದಲ್ಲಿ ಚರ್ಚೆಗೆ ದಾರಿ ಮಾಡಿಕೊಟ್ಟಿದೆ. ಮುಂಬರುವ ದಿನಗಳಲ್ಲಿ ಇವರು ಯಾವ ಪಕ್ಷ ಸೇರ್ಪಡೆಯಾಗಲಿದ್ದಾರೆ ಎಂಬುದು ಕುತೂಹಲ ಮೂಡಿಸಿದ್ದು, "ಬೆಂಬಲಿಗರೊಂದಿಗೆ ಚರ್ಚಿಸಿ ಮುಂದಿನ ನಿರ್ಧಾರ ಪ್ರಕಟಿಸುತ್ತೇನೆ," ಎಂದು ಅವರು ತಿಳಿಸಿದ್ದಾರೆ.

## ಸಿರವಾರದಲ್ಲಿ 100 ಫಲಾನುಭವಿಗಳಿಗೆ ಕೊಳವೆಬಾವಿ, ಪಂಪ್–ಮೋಟಾರ್ ವಿತರಣೆ

ಧೈರ್ಯದ ದಾರಿ

**ಮಾನ್ವಿ, ಏ.18:** ಮಾನ್ವಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಸಿರವಾರ ತಾಲೂಕಿನ ಸಿರವಾರ ಪಟ್ಟಣದಲ್ಲಿ ಇಂದು ಸಣ್ಣ ನೀರಾವರಿ ಹಾಗೂ ಅಂತರ್ಜಲ ಅಭಿವೃದ್ಧಿ ಇಲಾಖೆಯ ಸಹಯೋಗದಲ್ಲಿ ಎಸ್‌ಸಿಪಿ–ಟಿಎಸ್‌ಪಿ 2025–26 ಯೋಜನೆಯಡಿ 100 ಜನ ಫಲಾನುಭವಿಗಳಿಗೆ ಕೊಳವೆಬಾವಿ ಕೊರೆಸಿ ಪಂಪ್ ಮತ್ತು ಮೋಟಾರ್‌ಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಸಣ್ಣ ನೀರಾವರಿ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಹಾಗೂ ಪರಿಷತ್ತಿನ ಸಭಾ ನಾಯಕರು ಶ್ರೀ ಎನ್.ಎಸ್. ಬೋಸರಾಜು ಮತ್ತು ಕ್ಷೇತ್ರದ ಶಾಸಕರಾದ ಶ್ರೀ ಜಿ. ಹಂಪಯ್ಯ ನಾಯಕ್ ಸಾಹುಕಾರ್ ಭಾಗವಹಿಸಿ ಫಲಾನುಭವಿಗಳಿಗೆ ಸೌಲಭ್ಯಗಳನ್ನು ಹಸ್ತಾಂತರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು ಮತ್ತು ಶಾಸಕರು, ಸರ್ಕಾರದ ಯೋಜನೆಗಳು ಸಮರ್ಪಕವಾಗಿ ಜನರಿಗೆ ತಲುಪಿದಾಗ ಮಾತ್ರ ಅಭಿವೃದ್ಧಿ ಕಾರ್ಯಗಳು ಅರ್ಥಪೂರ್ಣವಾಗುತ್ತವೆ ಎಂದು ಹೇಳಿದರು.

ಸಚಿವರು ಮುಂದುವರೆದು, ಮಾನ್ವಿ ಕ್ಷೇತ್ರದಲ್ಲಿ ಏತ ನೀರಾವರಿ ಯೋಜನೆಗಳಿಗೆ ಸರ್ಕಾರ ಹೆಚ್ಚಿನ ಪ್ರಾಮುಖ್ಯತೆ ನೀಡಿದ್ದು, ನಾರಾಯಣಪುರ ಜಲಾಶಯದಿಂದ ಟೆಲೆಂಡ್ ಪ್ರದೇಶದ ರೈತರಿಗೆ ನೀರು ತಲುಪಿಸುವ ಯೋಜನೆಗೆ ಶೀಘ್ರವೇ ಸಚಿವ ಸಂಪುಟ ಅನುಮೋದನೆ ದೊರಕಲಿದೆ ಎಂದು ತಿಳಿಸಿದರು. ಈ ಯೋಜನೆಯಿಂದ ರೈತರಿಗೆ ಎರಡು ಬೆಳೆಗಳಿಗೆ ನೀರು ಲಭ್ಯವಾಗಲಿದೆ ಎಂದರು.

ತುಂಗಭದ್ರಾ ಜಲಾಶಯದ 32 ಗೇಟ್‌ಗಳನ್ನು ಸಂಪೂರ್ಣವಾಗಿ ನವೀಕರಿಸಲಾಗುತ್ತಿದ್ದು, ಮುಂದಿನ ತಿಂಗಳೊಳಗೆ ಜಲಾಶಯ ತನ್ನ ಪೂರ್ಣ ನೀರು ಸಂಗ್ರಹ ಸಾಮರ್ಥ್ಯವನ್ನು ಪಡೆಯಲಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮಾಜಿ ಶಾಸಕ ಡಿ.ಎಸ್. ಹುಲಿಗೇರಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಚುಕ್ಕಿ ಶಿವಕುಮಾರ್, ಬ್ರಿಜೇಶ್ ಪಾಟೀಲ್, ಕಿರಲಿಂಗಪ್ಪ ಕವಿತಾಳ್ ಸೇರಿದಂತೆ ಹಲವು ಮುಖಂಡರು ಮತ್ತು ಅಧಿಕಾರಿಗಳು ಉಪಸ್ಥಿತರಿದ್ದರು.







## ರೈತರ ಮಗನೆಂದೆ ಹೆಸರಾದ ಬಸನಗೌಡ ತುರ್ವಿಹಾಳರಿಗೆ ಸಚಿವ ಸ್ಥಾನ ನೀಡಲು– ಹವಾಲ್ದಾರ್ ಒತ್ತಾಯ

ಧೈರ್ಯದ ದಾರಿ

**ರಾಯಚೂರು:** ಮಸ್ಕಿ ಕ್ಷೇತ್ರದ ಮತದಾರರು ಕ್ಷೇತ್ರದ ರೈತರ ಮಗನೆಂದೆ ಹೆಸರಾದ ಬಸನಗೌಡ ತುರ್ವಿಹಾಳರಿಗೆ ಆರ್ಶಿವಾದ ಮಾಡಿ ರಾಜ್ಯ ಹಾಗೂ ರಾಷ್ಟ್ರನಾಯಕರ ಕಣ್ಣು ತೆರೆಸಿದ ಹಾಗೂ ಮಸ್ಕಿ ವಿಧಾನಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್‌ಗೆ ಪುರ್ನಜನ್ಮ ನೀಡಿದ ಶಾಸಕ ಬಸನಗೌಡ ತುರ್ವಿಹಾಳರಿಗೆ ಸಚಿವ ಸ್ಥಾನ ನೀಡಬೇಕು ಎಂದು ಮಸ್ಕಿಬ್ಲಾಕ್ ಕಾಂಗ್ರೆಸ್ ಮಹಿಳಾ ಘಟಕದ ಅಧ್ಯಕ್ಷರಾದ ಬೇಗಂ ಹವಾಲ್ದಾರ್ ಹೇಳಿದರು.

2021ರ ಮಸ್ಕಿ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಅನ್ನು ಬಹಳಷ್ಟು ಜನ ಗೇಲಿ ಮಾಡಿದ್ದರು, ರಾಜ್ಯದ ಬಿಜೆಪಿಯ ಮುಖ್ಯ ಮಂತ್ರಿಯಾದಿಯಾಗಿ ಅವರ ಸಚಿವ ಸಂಪುಟದ ಸಹೊದ್ಯೋಗಿಗಳು ಮಸ್ಕಿ ವಿಧಾನಸಭಾ ಕ್ಷೇತ್ರದಲ್ಲಿ ಪ್ರತಿಯೊಂದು ಗ್ರಾಮ ಪಂಚಾಯತಿಗೆ ಒಬ್ಬರಂತೆ ಸಚಿವರು ಬೀಡುಬಿಟ್ಟಿದ್ದರು ಆದರೂ ಕೂಡ ಸುಮಾರು 36 ಸಾವಿರ ಅಧಿಕ ಮತಗಳ ಅಂತರದಿಂದ ಗೆದ್ದು ಆಡಳಿತ ಸರಕಾರಕ್ಕೆ ಶೆಡ್ಡು ಹೊಡೆದ ರೈತ ನಾಯಕ ಆರ್.ಬಸನಗೌಡ ತುರ್ವಿಹಾಳರಾಗಿದ್ದಾರೆ.2023 ರ ಸಾರ್ವತ್ರಿಕ ಚುನಾವಣೆಯಲ್ಲಿವೂ ಕೂಡ ಮತ್ತೊಮ್ಮೆ ಭರ್ಜರಿ ಜಯ ಸಾಧಿಸುವುದರ ಮೂಲಕ ಮಸ್ಕಿ ವಿಧಾನಸಭಾ ಕ್ಷೇತ್ರವನ್ನು ಕಾಂಗ್ರೆಸ್ ಭದ್ರಕೋಟೆ ಎಂದು ಸಾಭಿತು ಪಡಿಸಿದ್ದಾರೆ.



ಕೇಂದ್ರ ಮತ್ತು ರಾಜ್ಯದಲ್ಲಿ ಬಿಜೆಪಿ ಸರ್ಕಾರವಿದ್ದಾಗ ನಡೆದ ಮಸ್ಕಿ ವಿಧಾನಸಭಾ ಉಪಚುನಾವಣೆ ಸೇರಿ ಎರಡು ಬಾರಿ ಗೆಲುವು ಸಾಧಿಸಿದ್ದರಿಂದ ಕ್ಷೇತ್ರದ ಜನರು ಸಚಿವರಾಗಲು ಬಯಸುತ್ತಿದ್ದಾರೆ.

ಪರಿಶಿಷ್ಟ ಪಂಗಡಕ್ಕೆ ನೀಡಿದ ಎರಡು ಸಚಿವ ಸ್ಥಾನಗಳು ವಿವಿಧ ಕಾರಣಗಳಿಂದಾಗಿ ಖಾಲಿ ಇವೆ ಆಗಾಗಿ ಪರಿಶಿಷ್ಟ ಪಂಗಡ ಕೋಟಾದಲ್ಲಿ ಮಸ್ಕಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಆರ್ ಬಸನಗೌಡ ತುರ್ವಿಹಾಳರನ್ನು ಪರಿಗಣಿಸಿ ಸಚಿವ ಸ್ಥಾನ ನೀಡಲು ರಾಜ್ಯ ಕಾಂಗ್ರೆಸ್ ವರಿಷ್ಠರಿಗೆ ಒತ್ತಾಯಿಸಿದರು.

ಮೊದಲನೇ ಪುಟದಿಂದ

# ಜಾನುವಾರುಗಳಿಗೆ ಲಸಿಕೆ ಹಾಕುವ ಕಾರ್ಯಕ್ರಮ ಯಶಸ್ವಿಗೊಳಿಸಿ: ಎಡಿಸಿ ಶಿವಾನಂದ

ರೈತರ ಆರ್ಥಿಕ ಪರಿಸ್ಥಿತಿ ಉತ್ತಮಗೊಳ್ಳಿಸುವುದು ಕಾರ್ಯಕ್ರಮದ ಉದ್ದೇಶವಾಗಿದೆ ಎಂದು ಅವರು ಹೇಳಿದರು.
ಲಸಿಕಾ ಅಭಿಯಾನ ಕಾರ್ಯಕ್ರಮದಲ್ಲಿ ರೈತರು ತಮ್ಮ ಜಾನುವಾರುಗಳಿಗೆ ಲಸಿಕೆ ಹಾಕಿಸಿ ಶೇ.100 ರಷ್ಟು ಗುರಿ ಸಾಧಿಸಲು ಸಹಕರಿಸಲು ಗ್ರಾಮೀಣ ಭಾಗದಲ್ಲಿ ಹೆಚ್ಚು ಜಾಗೃತಿ ಮೂಡಿಸುವಂತೆ ಅಪರ ಜಿಲ್ಲಾಧಿಕಾರಿ ಅವರು ತಿಳಿಸಿದರು.
ಪಶುಪಾಲನೆ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಉಪನಿರ್ದೇಶಕ ಪೋಮ್‌ಸಿಂಗ್ ಅವರು ಸ್ವಾಗತಿಸಿ, ಸಭೆ ನಿರ್ವಹಿಸಿದರು.
ಸಭೆಯಲ್ಲಿ ಜಿಲ್ಲೆಯ ವಿವಿಧ ತಾಲೂಕಿನ ಪಶುವೈದ್ಯಾಧಿಕಾರಿಗಳು, ಕೆ.ಎಮ್.ಎಫ್ ವಿಸ್ತರಣಾಧಿಕಾರಿಗಳು, ಕೆ.ಎಮ್.ಎಫ್ ಪಶು ಅಧಿಕಾರಿಗಳು, ಮುಖ್ಯ ಪಶು ಅಧಿಕಾರಿಗಳು ಸಭೆಯಲ್ಲಿ ಇದ್ದರು.

# ಕಾಂಗ್ರೆಸ್ ವಿರುದ್ಧ ಎಚ್‌ಡಿಕೆ ವಾಗ್ದಾಳಿ

ಅದೇ ಕಾಂಗ್ರೆಸ್ ಹಾಗೂ ಅದರ ಮಿತ್ರಪಕ್ಷಗಳು ಸೇರಿ ಸನ್ಮಾನ್ಯ ಮೋದಿ ಅವರ ಪ್ರಯತ್ನಕ್ಕೆ ತಡೆಯೊಡ್ಡಿವೆ ಎಂದು ಬೇಸರ ವ್ಯಕ್ತಪಡಿಸಿದ್ದಾರೆ. ಮಹಿಳಾ ಮೀಸಲು ಮಸೂದೆಯನ್ನು ಸೋಲಿಸಿದ ಕೂಟದ ಶಕ್ತಿಗಳನ್ನು ರಾಷ್ಟ್ರದ ನಾರಿಶಕ್ತಿ ಎಂದಿಗೂ ಕ್ಷಮಿಸುವುದಿಲ್ಲ. ಇದು ಮಾತೃಶಕ್ತಿಗೆ ಆಗಿರುವ ಅಪಮಾನ. ಇದಕ್ಕೆ ಕಾರಣರಾದ ಎಲ್ಲರೂ ತಕ್ಕ ಶಾಸ್ತಿ ಅನುಭವಿಸಬೇಕಾಗುತ್ತದೆ ಎಂದು ಕಿಡಿಕಾರಿದ್ದಾರೆ.ರಾಷ್ಟ್ರದ ನಾರಿಶಕ್ತಿಗೆ ನನ್ನ ಮನವಿ ಇಷ್ಟೇ, ನಿರಾಶೆ ಬೇಕಿಲ್ಲ.
ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ ಮುಂದೊಂದು ದಿನ ನಿಮಗೆ ಅಗ್ರಮನ್ನಣೆ ಸಿಕ್ಕೇ ಸಿಗುತ್ತದೆ. 33% ಮಹಿಳಾ ಮೀಸಲು ಗುರಿ ಸಾಧಿಸುವುದು ಶತಸಿದ್ಧ ಎಂದು ಹೆಚ್‌ಡಿಕೆ ಪ್ರತಿಜ್ಞೆ ಮಾಡಿದ್ದಾರೆ.

# ಪರಿಸರ ಉಳಿದರೆ ಮಾತ್ರ ನಾವೇಲ್ಲರು ಉಳಿಯುವುದಕ್ಕೆ ಸಾಧ್ಯ: ಸಲ್ಲಾವುದ್ದೀನ್



ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ನೇತಾಜಿ ಶಿಕ್ಷಣ ಸಂಸ್ಥೆಯ ಸಭಾಂಗಣದಲ್ಲಿ ಬೇಸಿಗೆ ಶಿಬಿರದ ಅಂಗವಾಗಿ ನಡೆದ ವಸಂತೋತ್ಸವ ಸಮಾರಂಭವನ್ನು ಉದ್ಘಾಟಿಸಿ ಪಕ್ಷಿ ಪ್ರೇಮಿ ಸಲ್ಲಾವುದ್ದೀನ್ ಮಾತನಾಡಿ ಪರಿಸರ ಉಳಿಯಬೇಕು, ಭೂಮಿ ಮೇಲಿನ ಎಲ್ಲರ ಜೀವನ ಸುಗಮವಾಗಿ ಸಾಗಬೇಕಾದರೆ ಗುಬ್ಬಚ್ಚಿಯಂತಹ ಚಿಕ್ಕ ಪಕ್ಷಿಗಳು ಕೂಡ ಉಳಿಯಬೇಕು. ಆದ್ದರಿಂದ ನಾವೆಲ್ಲರೂ ಗಿಡ,ಮರ,ಪ್ರಾಣಿ,ಪಕ್ಷಿ ಗಳ ಬಗ್ಗೆ ಪ್ರೀತಿ ಬೆಳೆಸಿಕೊಳ್ಳಬೇಕು ಎಂದು ತಿಳಿಸಿದರು.
ನೇತಾಜಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಕೆ.ಈ.ನರಸಿಂಹ ಮಾತನಾಡಿ ಪ್ರತಿವರ್ಷ ನಮ್ಮ ನೇತಾಜಿ ಶಿಕ್ಷಣ ಸಂಸ್ಥೆಯಿಂದ ನಡೆಯುವ ಬೇಸಿಗೆ ಶಿಬಿರದಲ್ಲಿ ಭಾಗವಿಸಿದ ಮಕ್ಕಳಿಗೆ ನಾಡಿನ ಪ್ರಸಿದ್ಧ ವ್ಯಕ್ತಿ ಗಳು, ಕವಿಗಳು, ಸಾಧಕರು, ಪರಿಸರ ಪ್ರೇಮಿಗಳು,ಹಾಸ್ಯ ಕಲಾವಿದರನ್ನು ಕರೆಸುವ ಮೂಲಕ ಅವರಿಂದ ಜಗತ್ತಿನ ಜ್ಞಾನ ಪಡೆಯುವ ಅವಕಾಶವನ್ನು ಕಲ್ಪಿಸಲಾಗುತ್ತದೆ ಎಂದು ತಿಳಿಸಿದರು.
ಪಕ್ಷಿ ಪ್ರೇಮಿ ಸಲ್ಲಾವುದ್ದೀನ್ ರವರು ನಮ್ಮ ಸುತ್ತಮುತ್ತಲಿನ ಪರಿಸರದಲ್ಲಿ ದೊರೆಯುವ ವಸ್ತುಗಳನ್ನು ಬಳಸಿಕೊಂಡು ಕೃತಕ ಗೂಡು ಹಾಗೂ ಪಕ್ಷಿಗಳಿಗೆ ನೀರುಣಿಸುವ ಸಾಧನಗಳನ್ನು ನಿರ್ಮಿಸುವ ಬಗ್ಗೆ ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿದರು.
ಲಿಂಗಸೂರಿನ ಗಾಯಕ ಹುಸೇನ್ ಸಾಬ್ ಕನ್ನಡ ಹಾಡುಗಳನ್ನು ಹಾಡಿ ವಿದ್ಯಾರ್ಥಿಗಳನ್ನು ರಂಜಿಸಿದರು.
ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಕೆ.ವಿಜಯಲಕ್ಷ್ಮೀ, ಕೆ.ರಾಜಾರವಿವರ್ಮಾ, ಡಾ.ವಿನಯಾ,ಜಗನ್ನಾಥ ಚೌದ್ರಿ, ಶಿಕ್ಷಕರಾದ ಬಸವರಾಜ, ರಹಿಂ,ಆರೀಫ್, ಅರುಣಾ, ಸುಪ್ರಿಯಾ, ಕಾವ್ಯ, ಉಮಾದೇವಿ, ಶರಣಬಸವ ಸೇರಿದಂತೆ ಬೇಸಿಗೆ ಶಿಬಿರದಲ್ಲಿ 350 ಕ್ಕು ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿದರು.

# ವಿಜಯನಗರ ಸಾಮ್ರಾಜ್ಯದ ಪ್ರತಿಷ್ಠಾಪನ ದಿನಾಚರಣೆ




ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ಮಾಹರ್ಷಿ ವಾಲ್ಮೀಕಿ ವೃತ್ತದಲ್ಲಿ ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾ ಹಾಗೂ ಕರ್ನಾಟಕ ರಾಜ್ಯ ಬೆಡರ ಸಮಿತಿ ಸಂಯುಕ್ತಾಶ್ರಯದಲ್ಲಿ ವಿಜಯನಗರ ಸಾಮ್ರಾಜ್ಯದ ಪ್ರತಿಷ್ಠಾಪನ ದಿನಾಚರಣೆಯನ್ನು ವಿಜಯನಗರ ಸಾಮ್ರಾಜ್ಯದ ಸ್ಥಾಪಕರಾದ ಹಕ್ಕಬುಕ್ಕರ ಭಾವಚಿತ್ರಕ್ಕೆ ಪುಷ್ಪವನ್ನು ಸಮರ್ಪಿಸುವ ಮೂಲಕ ಆಚರಿಸಿ ಎ.ಪಿ.ಎಂ.ಸಿ. ಮಾಜಿ ಸದಸ್ಯರಾದ ಶಿವರಾಜ ನಾಯಕ ವಕೀಲರು ಮಾತನಾಡಿ ದಕ್ಷಿಣ ಭಾರತದ ಅತ್ಯಂತ ಪ್ರಸಿದ್ಧವಾದ ಸಾಮ್ರಾಜ್ಯಗಳಲ್ಲಿ ವಿಜಯನಗರ ಸಾಮ್ರಾಜ್ಯ ಪ್ರಥಮವಾಗಿದೆ ಹಕ್ಕಬುಕ್ಕರು 1336 ಏ.18 ರಂದು ವಿಜಯನಗರ ಸಾಮ್ರಾಜ್ಯವನ್ನು ಸ್ಥಾಪಿಸಿದರು ಎಂದು ನಮಗೆ ಇತಿಹಾಸದಿಂದ ತಿಳಿದುಬರುತ್ತದೆ ಅದ್ದರಿಂದ ಇಂತಹ ಇತಿಹಾಸ ಪುರುಷರನ್ನು ಸ್ಮರಿಸಿಕೊಳ್ಳುವ ಮೂಲಕ ನಮ್ಮ ಇತಿಹಾಸವನ್ನು ಮುಂದಿನ ಪೀಳಿಗೆಗೆ ತಲುಪಿಸಬೇಕಾಗಿದೆ ಎಂದು ತಿಳಿಸಿದರು.
ಕಾರ್ಯಕ್ರಮದಲ್ಲಿ ಪುರಸಭೆ ನಾಮ ನಿರ್ದೇಶನ ಸದಸ್ಯರಾದ ಹಂಪಯ್ಯ ನಾಯಕ, ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾ ತಾಲೂಕು ಅಧ್ಯಕ್ಷರಾದ ದೇವು ನಾಯಕ. ಪದಾಧಿಕಾರಿಗಳಾದ ಕೊಂಡಯ್ಯನಾಯಕ, ನಾಯ್ಡುನಾಯಕ , ಕರ್ನಾಟಕ ರಾಜ್ಯ ಬೆಡರ ಪಡೆ ರಾಜ್ಯಾಧ್ಯಕ್ಷರಾದ ಅಂಬಣ್ಣ ನಾಯಕ, ಸಿದ್ರಾಮಪ್ಪ ಸಾಹುಕಾರ, ಮೌನೇಶ ನಾಯಕ, ಜೆಲ್ಲಿ ಆಂಜಿನಯ್ಯ ನಾಯಕ ನೀರಮಾನ್ವಿ, ಅಮರೇಶ ನಾಯಕ ಜಾನೇಕಲ್, ದೇವರಾಜ್ ನಾಯಕ, ಚಿದಾನಂದ ನಾಯಕ, ಆಂಜನೇಯ ನಾಯಕ ನಸಲಾಪುರ,ದೇವರಾಜ ಚಿಕ್ಕ ಕೊಟ್ನೆಕಲ್, ಜಿ.ನರಸಿಂಹ ನಾಯಕ ಕರಡಿಗುಡ್ಡ ಸೇರಿದಂತೆ ಇನ್ನಿತರರು ಇದ್ದರು.

# ಅಪಘಾತದಲ್ಲಿ ಮೃತರ ಕುಟುಂಬಕ್ಕೆ ಸಚಿವರು, ಶಾಸಕರಿಂದ ಸಾಂತ್ವನ

**ಸಿರವಾರ, ಏ.18:** ಸುರಪುರ ತಾಲೂಕಿನ ಬಳಿ ಸಂಭವಿಸಿದ ದುರ್ಘಟನೆಯಲ್ಲಿ ಆರು ಮಂದಿ ಮೃತಪಟ್ಟ ಘಟನೆಗೆ ಸಂಬಂಧಿಸಿದಂತೆ, ಸಿರವಾರ ಪಟ್ಟಣ ಪಂಚಾಯಿತಿ ಸದಸ್ಯರಾದ ಶ್ರೀ ಕೃಷ್ಣ ನಾಯಕ್ ಅವರ ಕುಟುಂಬದವರಿಗೆ ಇಂದು ಸಾಂತ್ವನ ಸೂಚಿಸಲಾಯಿತು.
ಮಾನ್ವಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಸಿರವಾರ ಪಟ್ಟಣದಲ್ಲಿ ಮೃತರ ಕುಟುಂಬದ ನಿವಾಸಕ್ಕೆ ಭೇಟಿ ನೀಡಿದ ಸಣ್ಣ ನೀರಾವರಿ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಹಾಗೂ ಪರಿಷತ್ತಿನ ಸಭಾ ನಾಯಕರು ಶ್ರೀ ಎನ್.ಎಸ್. ಬೋಸರಾಜು ಮತ್ತು ಕ್ಷೇತ್ರದ ಶಾಸಕರಾದ ಶ್ರೀ ಹಂಪಯ್ಯ ನಾಯಕ್ ಸಾಹುಕಾರ್ ಅವರು ಕುಟುಂಬಸ್ಥರಿಗೆ ಧೈರ್ಯ ತುಂಬಿದರು.
ಈ ಸಂದರ್ಭದಲ್ಲಿ ಸಚಿವರು ಮತ್ತು ಶಾಸಕರು ದುರ್ಘಟನೆಯಲ್ಲಿ ಮೃತಪಟ್ಟವರ ಆತ್ಮಕ್ಕೆ ಶಾಂತಿ ಕೋರಿ, ಕುಟುಂಬಸ್ಥರಿಗೆ ಧೈರ್ಯದಿಂದ ಎದುರಿಸಲು ಮನವಿ ಮಾಡಿದರು.
ಈ ವೇಳೆ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಚುಕ್ಕಿ ಶಿವಕುಮಾರ್,



ಬ್ರಿಜೇಶ್ ಪಾಟೀಲ್, ಚುಕ್ಕಿ ಸೋಗಪ್ಪ ಸಾಹುಕಾರ್, ಗುಡದಿನ್ನಿ ಶರಣಯ್ಯ ನಾಯಕ್, ಶ್ರೀನಿವಾಸ್ ಜಾಲಪುರ್ ಕ್ಯಾಂಪ್, ಬಸವರಾಜ್ ನಾಯಕ್ ಜಾಲಾಪುರ, ಶಿವಪ್ಪಗೌಡ ಹಳ್ಳಿಹೊಸೂರ್, ದಾನನ್ ಗೌಡ, ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಶ್ರೀಮತಿ ರೇಣುಕಾ, ಅಬ್ರಹಾಮ್ ಹೊನ್ನಟ್ಟಿಗಿ, ಅಮರೇಶಪ್ಪ ಸಾಹುಕಾರ್, ಪಟ್ಟಣ ಪಂಚಾಯಿತಿ ಸದಸ್ಯರಾದ ಹಾಸನ್ ಅಲಿ, ಚನ್ನಪ್ಪ ನಾಯಕ ಗಡ್ಡಾ, ತಹಶೀಲ್ದಾರ್ ಅಶೋಕ್ ಪವಾರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಮ್ಯಾನ್‌ಹೋಲ್ ಸ್ವಚ್ಛತೆಗೆ ಮಾನವ ಸಂಪನ್ಮೂಲ ಬಳಕೆ ನಿಷೇಧ: ಉಲ್ಲಂಘಿಸುವವರ ವಿರುದ್ಧ ಕಾನೂನು ಕ್ರಮ

ಧೈರ್ಯದ ದಾರಿ

**ರಾಯಚೂರು:** ನಗರದ ವ್ಯಾಪ್ತಿಯಲ್ಲಿ ಮ್ಯಾನ್‌ಹೋಲ್ ಹಾಗೂ ಸೆಪ್ಟಿಕ್ ಟ್ಯಾಂಕ್‌ಗಳ ಸ್ವಚ್ಛತೆಗಾಗಿ ಯಾವುದೇ ಕಾರಣಕ್ಕೂ ಮಾನವ ಸಂಪನ್ಮೂಲವನ್ನು ಬಳಸಬಾರದು ಎಂದು ರಾಯಚೂರು ಮಹಾನಗರ ಪಾಲಿಕೆ ಸಾರ್ವಜನಿಕರಲ್ಲಿ ಮನವಿ ಮಾಡಿದೆ.

ಮ್ಯಾನ್‌ಹೋಲ್ ಸ್ವಚ್ಛತೆಗೆ ಕಾರ್ಮಿಕರನ್ನು ಇಳಿಸುವುದು ಕೈಯಿಂದ ಮಲ ಹೊರುವವರ ಉದ್ಯೋಗ ನಿಷೇಧ ಮತ್ತು ಅವರ ಪುನರ್ವಸತಿ ಕಾಯ್ದೆ 2013ರ ಅಡಿಯಲ್ಲಿ ಗಂಭೀರ ಅಪರಾಧವಾಗಿದ್ದು, ಇದನ್ನು ಉಲ್ಲಂಘಿಸುವವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಮಹಾನಗರ ಪಾಲಿಕೆ ಆಯುಕ್ತರು ತಿಳಿಸಿದ್ದಾರೆ.

ಸಾರ್ವಜನಿಕರು ತಮ್ಮ ಮನೆ ಅಥವಾ ವಾಣಿಜ್ಯ ಸಂಸ್ಥೆಗಳ ಶೌಚಾಲಯದ ಗುಂಡಿಗಳನ್ನು ಸ್ವಚ್ಛಗೊಳಿಸಲು ಕಡ್ಡಾಯವಾಗಿ ಜೆಟ್ಟಿಂಗ್ ಯಂತ್ರಗಳನ್ನೇ ಬಳಸಬೇಕು. ಈ ನಿಟ್ಟಿನಲ್ಲಿ ಸಹಾಯಕ್ಕಾಗಿ ಪಾಲಿಕೆಯು ಅಧಿಕೃತ ವಾಹನ ಮಾಲೀಕರು ಮತ್ತು ಚಾಲಕರ ಪಟ್ಟಿಯನ್ನು ಬಿಡುಗಡೆ ಮಾಡಿದೆ. ಪಾಲಿಕೆಯ ಸಿಬ್ಬಂದಿಗಳಾದ ಆಂಜನೇಯ (9535832979), ಶ್ರೀಕಾಂತ್ (9980487004) ಮತ್ತು ಅನಂತ ಮೂರ್ತಿ (9964627849) ಅವರನ್ನು ಸಂಪರ್ಕಿಸಬಹುದು. ಅಲ್ಲದೆ ಖಾಸಗಿ ಜೆಟ್ಟಿಂಗ್ ಯಂತ್ರಗಳಿಗಾಗಿ ಕೃಷ್ಣ (9052245304), ವಿಜಯ ಕುಮಾರ್ (9620733791), ಮಂಜುನಾಥ (9008719827), ಗಂಗಣ್ಣ (9535623784) ಹಾಗೂ ಶಿವಣ್ಣ (9945118602) ಅವರನ್ನು ಸಂಪರ್ಕಿಸಲು ಕೋರಲಾಗಿದೆ. ಒಟ್ಟಾರೆಯಾಗಿ ನಗರದ ನೈರ್ಮಲ್ಯ ಕಾಪಾಡುವಲ್ಲಿ ಮತ್ತು ಕಾನೂನು ಪಾಲಿಸುವಲ್ಲಿ ಸಾರ್ವಜನಿಕರು ಸಹಕರಿಸಬೇಕು ಎಂದು ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರು ಈ ಮೂಲಕ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಏಪ್ರಿಲ್ 27ರಿಂದ ಕ್ರೀಡಾ ಶಾಲೆ, ವಸತಿ ನಿಲಯಗಳ ಪ್ರವೇಶಕ್ಕೆ ಶಿಬಿರ

**ರಾಯಚೂರು :** ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ನಿರ್ವಹಿಸಲಾಗುತ್ತಿರುವ ಕ್ರೀಡಾ ವಸತಿ ಶಾಲೆ ಹಾಗೂ ನಿಲಯಗಳಿಗೆ 2026–27ನೇ ಸಾಲಿಗೆ ಪ್ರವೇಶ ನೀಡಲು ಕ್ರೀಡಾಪಟುಗಳ ಆಯ್ಕೆ ಕುರಿತು ಅಂತಿಮ ರಾಜ್ಯ ಮಟ್ಟದ ಆಯ್ಕೆ ಶಿಬಿರವನ್ನು ಏಪ್ರಿಲ್.27ರಿಂದ ಮೇ.01ರವರೆಗೆ ರಾಜ್ಯದ ಕೆಲವು ಸ್ಥಳಗಳಲ್ಲಿ ವಿವಿಧ ಕ್ರೀಡೆಗಳಿಗೆ ಆಯ್ಕೆ ಶಿಬಿರಗಳನ್ನು ಆಯೋಜಿಸಲು ಉದ್ದೇಶಿಸಲಾಗಿದೆ.

8ನೇ ತರಗತಿ ಮತ್ತು ಪ್ರಥಮ ಪಿ.ಯು.ಸಿ ವಿದ್ಯಾರ್ಥಿಗಳಿಂದ ಕಿರಿಯರ ಮತ್ತು ಹಿರಿಯ ವಿಭಾಗದಲ್ಲಿ ಕ್ರೀಡಾ ವಸತಿ ಶಾಲೆಗಳ ಆಯ್ಕೆಯನ್ನು ಪ್ರಸ್ತುತ 7ನೇ ತರಗತಿ ಅಭ್ಯಾಸ ಮಾಡುತ್ತಿರುವ ಬಾಲಕ ಅಥವಾ ಬಾಲಕಿಯರಿಗಾಗಿ ದಿನಾಂಕ 01–06–2026 ರಂದು 14 ವರ್ಷದೊಳಗಿರಬೇಕು ಮತ್ತು 8ನೇ ತರಗತಿಗೆ ಪ್ರವೇಶ ಪಡೆಯಲು ಅರ್ಹರಾಗಿರಬೇಕು.

ಹಿರಿಯರ ವಿಭಾಗದ ಕ್ರೀಡಾ ವಸತಿ ಶಾಲೆಗಳ ಆಯ್ಕೆಯಲ್ಲಿ ಭಾಗವಹಿಸುವ ಕ್ರೀಡಾಪಟುಗಳು ದಿನಾಂಕ 01–06–2026 ರಂದು 18 ವರ್ಷದೊಳಗಿದ್ದು, ಪ್ರಥಮ ಪಿ.ಯು.ಸಿ ಪ್ರವೇಶ ಪಡೆಯಲು ಅರ್ಹರಿರಬೇಕು. ಆಯ್ಕೆಯನ್ನು ಪ್ರಸ್ತುತ 10ನೇ ತರಗತಿಯಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಬಾಲಕ ಅಥವಾ ಬಾಲಕಿಯರಿಗಾಗಿ ಆಯ್ಕೆ ನಡೆಸಲಾಗುತ್ತಿದೆ.

ವ್ಯಾಸಾಂಗ ಮಾಡುತ್ತಿರುವ ಶಾಲಾ ಮುಖ್ಯಸ್ಥರಿಂದ ಜನ್ಮ ದಿನಾಂಕ ಪ್ರಮಾಣಪತ್ರ ಹಾಗೂ ವ್ಯಾಸಂಗ ಮಾಡುತ್ತಿರುವ ತರಗತಿಯ ವಿವರಗಳನ್ನೊಳಗೊಂಡ ದೃಢೀಕರಣ ಪತ್ರವನ್ನು ಆಯ್ಕೆ ದಿನದಂದು ಕಡ್ಡಾಯವಾಗಿ ತರಬೇಕು.

ಆಸಕ್ತ ಕ್ರೀಡಾಪಟುಗಳು ನಿಗದಿತ ಅರ್ಜಿಯನ್ನು ಇಲಾಖೆಯಿಂದ ಪಡೆದು ಭರ್ತಿ ಮಾಡಿ ರಾಜ್ಯ ಮಟ್ಟದ ಆಯ್ಕೆ ಪ್ರಕ್ರಿಯೆ ಶಿಬಿರದಲ್ಲಿ ಭಾಗವಹಿಸಬಹುದಾಗಿದೆ. ರಾಜ್ಯದ ಯಾವುದೇ ಭಾಗದ ಕ್ರೀಡಾಪಟಗಳು ಭಾಗವಹಿಸಲು ಮುಕ್ತ ಅವಕಾಶವಿರುತ್ತದೆ. ಆಯ್ಕೆಯಲ್ಲಿ ಪಾಲ್ಗೊಳ್ಳುವ ಕ್ರೀಡಾಪಟುಗಳಿಗೆ ಯಾವುದೇ ವಿಧವಾದ ಭತ್ಯೆಯನ್ನು ನೀಡಲಾಗುವುದಿಲ್ಲ.

ಹೆಚ್ಚಿನ ವಿವರಗಳಿಗೆ ಸಹಾಯಕ ನಿರ್ದೇಶಕರ ಕಚೇರಿ ಮಹಾತ್ಮಗಾಂಧಿ ಜಿಲ್ಲಾ ಕ್ರೀಡಾಂಗಣ ರಾಯಚೂರು ಇಲ್ಲಿ ಅಥವಾ ಖೇಲೋ ಇಂಡಿಯಾ ತರಬೇತುದಾರರು ಚಂದ್ರಶೇಖರ್ ದೂರವಾಣಿ ಸಂಖ್ಯೆ: 9886551214ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಏಪ್ರಿಲ್ 23, 24ರಂದು ಸಿಇಟಿ ಪರೀಕ್ಷೆ: ರಾಯಚೂರಿನಲ್ಲಿ ಕಟ್ಟು ನಿಟ್ಟಿನ ವ್ಯವಸ್ಥೆ,




ಧೈರ್ಯದ ದಾರಿ

**ರಾಯಚೂರು:** 2025–2026ನೇ ಸಾಲಿನ ವೃತ್ತಿಪರ ಕೋರ್ಸ್‌ಗಳ ಪ್ರವೇಶಕ್ಕಾಗಿ ಸಾಮಾನ್ಯ ಪ್ರವೇಶ ಪರೀಕ್ಷೆಗಳು ಇದೇ ಏಪ್ರಿಲ್ 23 ಹಾಗೂ 24ರಂದು ಜಿಲ್ಲೆಯ 19 ಕೇಂದ್ರಗಳಲ್ಲಿ ನಡೆಯಲಿದ್ದು, ಪರೀಕ್ಷೆಗಳು ವ್ಯವಸ್ಥಿತವಾಗಿ ನಡೆಯಲು ಅಗತ್ಯವಿರುವ ಸಕಲ ಏರ್ಪಾಡುಗಳನ್ನು ಮಾಡಿಕೊಳ್ಳುವಂತೆ ಅಪರ ಜಿಲ್ಲಾಧಿಕಾರಿ ಶಿವಾನಂದ ಅವರು ಪದವಿ ಪೂರ್ವ ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಏಪ್ರಿಲ್ 18ರ ಶನಿವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಸಿಇಟಿ ಪರೀಕ್ಷೆ ಕುರಿತು ಪೂರ್ವಭಾವಿ ಸಿದ್ದತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸಿಇಟಿ ಪರೀಕ್ಷೆಯಲ್ಲಿ ಮತ್ತಷ್ಟು ಪಾರದರ್ಶಕತೆಯನ್ನು ಕಾಯ್ದುಕೊಳ್ಳುವ ದೃಷ್ಟಿಯಿಂದ ಪ್ರತಿ ಪರೀಕ್ಷಾ ಕೇಂದ್ರದಲ್ಲಿ ಫ್ರಿಸ್ಕಿಂಗ್, ಫೇಸ್ ರೆಕಗ್ನಿಶನ್ ಸೌಲಭ್ಯವನ್ನು ಮಾಡಲಾಗುತ್ತದೆ. ಪರೀಕ್ಷಾ ಮುನ್ನಾದಿನ ಪ್ರಾತ್ಯಕ್ಷಿಕೆಯ ಮೂಲಕ ಖಚಿತ ಪಡಿಸಿಕೊಳ್ಳಬೇಕೆಂದು ಪರೀಕ್ಷಾ ಕೇಂದ್ರದ ಸಂಬಂಧಿಸಿದ ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿಗಳು ಸೂಚಿಸಿದರು.

ವಿಜ್ಞಾನ ಉಪನ್ಯಾಸಕರನ್ನು ಕೊಠಡಿ ಮೇಲ್ವಿಚಾರಕರಾಗಿ ನೇಮಿಸಬಾರದು. ವಿಜ್ಞಾನವನ್ನು ಹೊರತುಪಡಿಸಿ ಇತರ ವಿಷಯದ ಉಪನ್ಯಾಸಕರನ್ನು ನೇಮಿಸಿಕೊಳ್ಳಬಹುದು. ಪ್ರತಿ 24 ಅಭ್ಯರ್ಥಿಗಳಿಗೆ ಒಬ್ಬರಂತೆ ಅವಶ್ಯವಿರುವಷ್ಟು ಕೊಠಡಿ ಮೇಲ್ವಿಚಾರಕರನ್ನು ನೇಮಿಸಬೇಕು. ಅಲ್ಲದೆ ಕೊಠಡಿ ಮೇಲ್ವಿಚಾರಕರಿಗೆ ಕೊಠಡಿ ನಿಯೋಜನೆಯನ್ನು ವೀಕ್ಷಕರ ಸಮ್ಮುಖದಲ್ಲಿ ಲಾಟರಿ ಮೂಲಕ ಮಾತ್ರ ಮಾಡಬೇಕು. ಪರೀಕ್ಷೆ ಪ್ರಾರಂಭವಾಗುವ ಮೊದಲು ಪ್ರತಿ ಅವಧಿಗೆ ಪ್ರತ್ಯೇಕ ಲಾಟರಿಗಳನ್ನು ಮಾಡಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. ಪರೀಕ್ಷೆ ಕೇಂದ್ರದಲ್ಲಿ ಶೌಚಾಲಯ ಸ್ವಚ್ಛವಿರಬೇಕು. ಪರೀಕ್ಷಾ ಕೇಂದ್ರದೊಳಗೆ ಕೈ ಗಡಿಯಾರ ನಿಷೇಧಿಸಲಾಗಿದೆ. ಪರೀಕ್ಷಾ ಕೇಂದ್ರಗಳ ಕೊಠಡಿಯ ಗೋಡೆ ಮೇಲೆ ಗಡಿಯಾರ ಹಾಕಬೇಕು. ಪ್ರತಿ ಕೊಠಡಿಯಲ್ಲಿ 24 ವಿದ್ಯಾರ್ಥಿಗಳಿಗೆ ಮಾತ್ರ ಅವಕಾಶ ನೀಡಲಾಗಿದೆ. ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಪಿಠೋಪಕರಣ ವ್ಯವಸ್ಥೆ ಮಾಡಿಕೊಳ್ಳಬೇಕು ಎಂದರು.

ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ ಅವರು ಮಾತನಾಡಿ, ಜಿಲ್ಲೆಯಲ್ಲಿ ಸಿಇಟಿ ಕೋರ್ಸ್‌ಗಳ ಪ್ರವೇಶಾತಿ ಪರೀಕ್ಷೆಗಳನ್ನು ಯಶಸ್ವಿಯಾಗಿ ನಿರ್ವಹಿಸಲು ಪೊಲೀಸ್ ಇಲಾಖೆಯಿಂದ ಸಂಪೂರ್ಣ ಭದ್ರತೆ ಹಾಗೂ ಸಹಕಾರ ನೀಡಲಾಗುವುದು ಎಂದರು.

**6,564 ಅಭ್ಯರ್ಥಿಗಳು ನೋಂದಣಿ:** ಜಿಲ್ಲೆಯಲ್ಲಿ ಇದೇ ಏಪ್ರಿಲ್ 23 ಹಾಗೂ 24ರಂದು ವೃತ್ತಿಪರ ಕೋರ್ಸ್‌ಗಳ ಪ್ರವೇಶಕ್ಕಾಗಿ ಸಾಮಾನ್ಯ ಪ್ರವೇಶ ಪರೀಕ್ಷೆಗಳು ನಡೆಯಲಿದ್ದು, ಪರೀಕ್ಷೆಗಾಗಿ ರಾಯಚೂರು ನಗರದಲ್ಲಿ 19ಕೇಂದ್ರಗಳನ್ನು ಗುರುತಿಸಲಾಗಿದೆ. ಪರೀಕ್ಷೆಗೆ 6564 ಅಭ್ಯರ್ಥಿಗಳಿಂದ ನೋಂದಣಿಯನ್ನು ಮಾಡಲಾಗಿದೆ. ಏಪ್ರಿಲ್ 23ರ ಬೆಳಿಗ್ಗೆ 10.30ರಿಂದ 11.50ರವರೆಗೆ ಭೌತಶಾಸ್ತ್ರ ಹಾಗೂ ಮಧ್ಯಾಹ್ನ 2.30ರಿಂದ 3.50ರವರೆಗೆ ರಸಾಯನ ಶಾಸ್ತ್ರ ಪರೀಕ್ಷೆ ನಡೆಯಲಿದೆ. ಏಪ್ರಿಲ್ 24ರ ಬೆಳಿಗ್ಗೆ 10.30ರಿಂದ 11.50ರವರೆಗೆ ಗಣಿತ ಶಾಸ್ತ್ರ, ಹಾಗೂ ಮಧ್ಯಾಹ್ನ 2.30ರಿಂದ 3.50ರವರಗೆ ಜೀವಶಾಸ್ತ್ರ ಪರೀಕ್ಷೆ ನಡೆಯಲಿದೆ ಎಂದು ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಸೋಮಶೇಖರ ಹೊಕ್ರಾಣಿ ಅವರು ಸಭೆಗೆ ಮಾಹಿತಿ ನೀಡಿದರು.

ಇದೇ ಸಂದರ್ಭದಲ್ಲಿ ರಾಯಚೂರು ಡಿವೈಎಸ್ಪಿ ಶಾಂತಮೂರ್ತಿ ಸೇರಿದಂತೆ ಜಿಲ್ಲೆಯ ವಿವಿಧ ಕಾಲೇಜಿನ ಪ್ರಾಂಶುಪಾಲರು, ವೃತ್ತಿಪರ ಕೋರ್ಸ್‌ಗಳ ಸಾಮಾನ್ಯ ಪ್ರವೇಶ ಪರೀಕ್ಷೆಯ ಕೊಠಡಿ ಮೇಲ್ವಿಚಾರಕರು, ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು ಇದ್ದರು.

# ಯಾದಗಿರಿ ಉರಿಯುತ್ತಿರುವ ಬಿಸಿಲಿಗೆ ತಾತ್ಕಾಲಿಕ ತಂಪು ಪರಿಹಾರ: ಮುಖ್ಯ ರಸ್ತೆಗಳಲ್ಲಿ ನೀರು ಸಿಂಪಡಿಸಲು ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರ ಕಟ್ಟುನಿಟ್ಟಿನ ನಿರ್ದೇಶನ

**ಯಾದಗಿರಿ: ಏ.18:**ಉತ್ತರ ಕರ್ನಾಟಕದ ಬಿಸಿಲಿನ ತೀವ್ರತೆ ದಿನದಿಂದ ದಿನಕ್ಕೆ ಅಮಿತವಾಗಿ ಏರಿಕೆಯಾಗುತ್ತಿದ್ದು, ಯಾದಗಿರಿ ನಗರವೇ ಉರಿಯುವ ತಾಪದ ಅಲೆಗಳಲ್ಲಿ ಸಿಲುಕಿಕೊಂಡಂತಾಗಿದೆ. ಜನಜೀವನ ಸಂಕಷ್ಟಕ್ಕೆ ಸಿಲುಕಿರುವ ಈ ಸಂದರ್ಭದಲ್ಲಿ ಸಾರ್ವಜನಿಕರ ಆರೋಗ್ಯ ಹಾಗೂ ಸಂಚಾರ ಸೌಕರ್ಯವನ್ನು ಗಮನದಲ್ಲಿಟ್ಟುಕೊಂಡು ನಗರದ ಪ್ರಮುಖ ರಸ್ತೆಗಳಲ್ಲಿ ತಕ್ಷಣವೇ ನೀರು ಸಿಂಪಡಿಸುವ ಕಾರ್ಯಾಚರಣೆ ಕೈಗೊಳ್ಳಬೇಕೆಂದು ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರ ನಗರಸಭೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ನಗರಸಭೆ ವತಿಯಿಂದ ಸುಮಾರು ?5 ಲಕ್ಷ ವೆಚ್ಚದಲ್ಲಿ ಸುಭಾಷ್ ಸರ್ಕಲ್ ಪ್ರದೇಶದಲ್ಲಿ ಅಳವಡಿಸಲಾದ ಹಸಿರು ನೆರಳಿನ ಪರದೆಗಳ ಸ್ಥಿತಿಗತಿಗಳನ್ನು ಶುಕ್ರವಾರ ಸಮೀಕ್ಷೆ ನಡೆಸಿದ ಶಾಸಕರು, ಬಿಸಿಲಿನ ತೀವ್ರತೆಗೆ ತಾತ್ಕಾಲಿಕ ಪರಿಹಾರ ಒದಗಿಸುವ ಕ್ರಮಗಳಷ್ಟೇ ಅಲ್ಲದೆ, ದೀರ್ಘಕಾಲಿಕ ನಿರ್ವಹಣಾ ವ್ಯವಸ್ಥೆಗಳನ್ನೂ ರೂಪಿಸಬೇಕೆಂದು ಸೂಚಿಸಿದರು. ನಗರದಲ್ಲಿ ಜನಸಂದಣಿ ಹೆಚ್ಚು ಇರುವ ಪ್ರದೇಶಗಳಲ್ಲಿ ಇಂತಹ ನೆರಳಿನ ವ್ಯವಸ್ಥೆಗಳನ್ನು ವಿಸ್ತರಿಸುವ ಅಗತ್ಯವಿದೆ ಎಂಬುದನ್ನೂ ಅವರು ಉಲ್ಲೇಖಿಸಿದರು.

ಇದೇ ವೇಳೆ ಶಾಸ್ತ್ರಿ ಚೌಕದಲ್ಲಿರುವ ಎಲ್‌ಇಡಿ ಡಿಜಿಟಲ್ ಪ್ರದರ್ಶನ ಫಲಕದ ಬಳಕೆಯನ್ನು ಸಮರ್ಪಕವಾಗಿ ಮಾಡಿಕೊಳ್ಳುವಂತೆ ಸೂಚಿಸಿದ ಅವರು, ಬೇಸಿಗೆ ಅವಧಿ ಪೂರ್ಣಗೊಳ್ಳುವವರೆಗೆ ಪ್ರತಿದಿನದ ಗರಿಷ್ಠ ತಾಪಮಾನ, ಆರೋಗ್ಯ ಸಂಬಂಧಿತ ಮುನ್ನೆಚ್ಚರಿಕೆ ಸೂಚನೆಗಳು ಹಾಗೂ ಸಾರ್ವಜನಿಕರಿಗೆ ಅಗತ್ಯ ಮಾಹಿತಿಯನ್ನು ಪ್ರದರ್ಶಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ನಗರದ ಪ್ರಮುಖ ರಸ್ತೆಗಳ ಮೇಲೆ ಧೂಳು ಮತ್ತು ಉಷ್ಣತೆಯನ್ನು ನಿಯಂತ್ರಿಸುವ ಉದ್ದೇಶದಿಂದ ಟ್ಯಾಂಕರ್‌ಗಳ ಮೂಲಕ ನಿಯಮಿತ ಅವಧಿಯಲ್ಲಿ ನೀರು ಸಿಂಪಡಿಸುವ ವ್ಯವಸ್ಥೆಯನ್ನು ತಕ್ಷಣ ಜಾರಿಗೆ ತರಬೇಕು ಎಂದು ಅವರು ಒತ್ತಾಯಿಸಿದರು. ಈ ಕ್ರಮದಿಂದ ವಾಹನ ಸವಾರರು ಹಾಗೂ ಪಾದಚಾರಿಗಳಿಗೆ ತಾತ್ಕಾಲಿಕ ತಂಪು ಸಿಗುವ ನಿರೀಕ್ಷೆಯಿದೆ ಎಂದು ಹೇಳಿದರು.

ಶಾಸಕರ ನಿರ್ದೇಶನಗಳಿಗೆ ಸ್ಪಂದಿಸಿದ ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಲಕ್ಷ್ಮೀಕಾಂತ ರೆಡ್ಡಿ ಹಾಗೂ ನಗರಸಭೆ ಪೌರಾಯುಕ್ತ ಉಮೇಶ ಚವ್ಹಾಣ, ಅಗತ್ಯ ಆಡಳಿತಾತ್ಮಕ ಕ್ರಮಗಳನ್ನು ತ್ವರಿತವಾಗಿ ಕೈಗೊಂಡು ಸೂಚನೆಗಳನ್ನು ಕಾರ್ಯರೂಪಕ್ಕೆ ತರಲಾಗುವುದು ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಯುಡಾ ಅಧ್ಯಕ್ಷ ಬಾಬುರಾವ ಕಾಡ್ಲೂರ್, ಕಾಂಗ್ರೆಸ್ ಮುಖಂಡರಾದ ಸಾಬಣ್ಣ ಕೆಂಗೂರಿ, ಶರಣಗೌಡ ಬಲಕಲ್, ತಿಮ್ಮಪ್ಪ ನಾಯಕ, ನಗರಸಭೆ ಸಮುದಾಯ ಸಂಘಟನಾಧಿಕಾರಿ ಭೀಮಣ್ಣ ವೈದ್ಯ, ಸಿಬ್ಬಂದಿಗಳಾದ ನಾಗರಾಜ ಚಿಂತನಳ್ಳಿ, ಅಶೋಕ ಯಾದವ, ಅವ್ವಮ್ಮ, ಪ್ರೇಮಾ ಸೇರಿದಂತೆ ಹಲವರು ಉಪಸ್ಥಿತರಿದ್ದು, ನಗರದಲ್ಲಿ ಬಿಸಿಲಿನ ತೀವ್ರತೆಗೆ ತಡೆಗಟ್ಟುವ ಕ್ರಮಗಳ ಕುರಿತು ಚರ್ಚೆ ನಡೆಸಿದರು.



# ಮಹರ್ಷಿ ಭಗೀರಥ ಜಯಂತಿ ಏ. 23ರಂದು: ಯಾದಗಿರಿಯಲ್ಲಿ ಭಕ್ತಿ-ಸಂಸ್ಕೃತಿ ಸಂಭ್ರಮಕ್ಕೆ ಸಜ್ಜು



**ಯಾದಗಿರಿ:ಏ.18:** ಮಹರ್ಷಿ ಭಗೀರಥರ ತಪಸ್ಸು, ತ್ಯಾಗ ಮತ್ತು ಜನಕಲ್ಯಾಣದ ಆದರ್ಶಗಳನ್ನು ಸ್ಮರಿಸುವ ಮಹರ್ಷಿ ಭಗೀರಥ ಜಯಂತಿ ಆಚರಣೆಗೆ ಯಾದಗಿರಿ ನಗರ ಸಜ್ಜಾಗಿದೆ. ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ ಏಪ್ರಿಲ್ 23ರಂದು ಬೆಳಿಗ್ಗೆ 11:30ಕ್ಕೆ ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ಮುಖ್ಯ ಕಾರ್ಯಕ್ರಮ ನಡೆಯಲಿದೆ ಎಂದು ಜಿಲ್ಲಾ ಭಗೀರಥ ಸಂಘದ ಜಿಲ್ಲಾಧ್ಯಕ್ಷ ಮಲ್ಲಿಕಾರ್ಜುನ ಕಟ್ಟಿಮನಿ ತಿಳಿಸಿದ್ದಾರೆ.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಬಾರಿ ಜಯಂತಿಯನ್ನು ಹೆಚ್ಚು ಅರ್ಥಪೂರ್ಣವಾಗಿ ಆಚರಿಸುವ ಉದ್ದೇಶದಿಂದ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು. ಮಹರ್ಷಿ ಭಗೀರಥರ ಜೀವನ ಮೌಲ್ಯಗಳನ್ನು ಯುವಪೀಳಿಗೆಗೆ ಪರಿಚಯಿಸುವುದು ಮತ್ತು ಸಮಾಜದಲ್ಲಿ ಏಕತೆ-ಸೌಹಾರ್ದತೆಯನ್ನು ಬಲಪಡಿಸುವುದು ಕಾರ್ಯಕ್ರಮದ ಮುಖ್ಯ ಗುರಿಯಾಗಿದೆ ಎಂದರು.

ಜಯಂತಿಯ ಅಂಗವಾಗಿ ಬೆಳಿಗ್ಗೆ 9 ಗಂಟೆಗೆ ರೈಲ್ವೆ ನಿಲ್ದಾಣದಿಂದ ಮೆರವಣಿಗೆ ಆರಂಭವಾಗಲಿದ್ದು, ನಗರದ ಪ್ರಮುಖ ವೃತ್ತಗಳನ್ನು ಸುತ್ತಿ ಸರ್ಕಾರಿ ಪದವಿ ಮಹಾವಿದ್ಯಾಲಯದವರೆಗೆ ಸಾಗಲಿದೆ. ಮೆರವಣಿಗೆಯಲ್ಲಿ ಸಾಂಪ್ರದಾಯಿಕ ವಾದ್ಯಗಳು, ಭಕ್ತಿಪರ ಘೋಷಣೆಗಳು ಹಾಗೂ ವಿವಿಧ ಕಲಾತಂಡಗಳ ಪ್ರದರ್ಶನಗಳು ನಡೆಯಲಿದ್ದು, ನಗರದಲ್ಲಿ ಹಬ್ಬದ ವಾತಾವರಣ ನಿರ್ಮಾಣವಾಗಲಿದೆ.

ಮುಖ್ಯ ಸಮಾರಂಭದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ, ವಿಧಾನಪರಿಷತ್ ವಿರೋಧ ಪಕ್ಷದ ನಾಯಕ ಛಲುವಾದಿ ನಾರಾಯಣಸ್ವಾಮಿ, ಶಾಸಕರಾದ ಚೆನ್ನಾರೆಡ್ಡಿ ಪಾಟೀಲ್ ತುನ್ನೂರ, ರಾಜಾ ವೇಣುಗೋಪಾಲ ನಾಯಕ ಹಾಗೂ ಶರಣಗೌಡ ಕಂದಕೂರ ಸೇರಿದಂತೆ ಅನೇಕ ಗಣ್ಯರು ಭಾಗವಹಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಮಹರ್ಷಿ ಭಗೀರಥರ ಸಾಧನೆಗಳ ಕುರಿತು ಉಪನ್ಯಾಸಗಳು, ಸಾಂಸ್ಕೃತಿಕ ಕಾರ್ಯಕ್ರಮಗಳು ಹಾಗೂ ಸಮಾಜ ಸೇವಕರಿಗೆ ಸನ್ಮಾನ ಕಾರ್ಯಕ್ರಮವೂ ನಡೆಯಲಿದೆ.

ಜಿಲ್ಲೆಯ ವಿವಿಧ ಭಾಗಗಳಿಂದ ಸಮಾಜದ ಮುಖಂಡರು, ಯುವಕರು, ಮಹಿಳೆಯರು ಹಾಗೂ ಸಂಘ ಸಂಸ್ಥೆಗಳ ಪ್ರತಿನಿಧಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಸಂಘದ ವತಿಯಿಂದ ಮನವಿ ಮಾಡಲಾಗಿದೆ.

ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸುಭಾಷ್ ಚಂದ್ರ ಕೋಟಗೇರಾ, ನಿವೃತ್ತ ಪಿಎಸ್‌ಐ ಯಂಕಣ್ಣ ಶಹಾಪುರಾಕರ್, ಕೋಟಗೇರಾ ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ರಾಮಣ್ಣ ಬಳಿಚಕ್ರ, ಸಂಘಟನಾ ಕಾರ್ಯದರ್ಶಿಗಳಾದ ರಾಮಲಿಂಗಪ್ಪ ಯರಗೋಳ, ತಮ್ಮಣ್ಣ ಉಪ್ಪಾರ ಬಳಿಚಕ್ರ, ಉಪ್ಪಾರ ಸಮಾಜದ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ವಿಶ್ವನಾಥ್ ಗುಡೂರು, ಭೀಮಷಪ್ಪ ಕಣೇಕಲ್, ತಿಮ್ಮಣ್ಣ ಬಳಿಚಕ್ರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಶರಣಗೌಡ ಕಂದಕೂರ ಹೋರಾಟ ಫಲ: ಹತ್ತಿಕುಣಿ ನಾಲಾ ಆಧುನೀಕರಣಕ್ಕೆ 72 ಕೋಟಿ ಮಂಜೂರು



**ಗುರುಮಠಕಲ್:ಏ.18**: ಕ್ಷೇತ್ರದ ರೈತರ ದೀರ್ಘಕಾಲದ ನಿರೀಕ್ಷೆಗೆ ಕೊನೆಗೂ ಸ್ಪಷ್ಟ ಉತ್ತರ ಸಿಕ್ಕಿದೆ. ಹತ್ತಿಕುಣಿ ಕಾಡಾ ನಾಲಾ ಆಧುನೀಕರಣ ಯೋಜನೆಗೆ ರಾಜ್ಯ ಸಚಿವ ಸಂಪುಟ 72 ಕೋಟಿ ಅನುದಾನಕ್ಕೆ ಹಸಿರು ನಿಶಾನೆ ತೋರಿಸಿದ್ದು, ಇದರಿಂದ ಸಾವಿರಾರು ರೈತರ ಬದುಕಿನಲ್ಲಿ ಹೊಸ ನಿರೀಕ್ಷೆಯ ಬೆಳಕು ಮೂಡಿದೆ.

ಈ ಮಹತ್ವದ ಯೋಜನೆಗೆ ಅನುಮೋದನೆ ದೊರಕುವಲ್ಲಿ ಶಾಸಕ ಶರಣಗೌಡ ಕಂದಕೂರ ಅವರ ನಿರಂತರ ಪ್ರಯತ್ನ ಪ್ರಮುಖ ಪಾತ್ರವಹಿಸಿದೆ. ಕಳೆದ ಮೂರು ತಿಂಗಳ ಅವಧಿಯಲ್ಲಿ ಅವರು ಸರ್ಕಾರದ ಗಮನ ಸೆಳೆಯಲು ಸದನದಲ್ಲಿಯೂ, ಆಡಳಿತ ಮಟ್ಟದಲ್ಲಿಯೂ ಹೋರಾಟ ನಡೆಸಿ, ಯೋಜನೆಯ ತುರ್ತು ಅಗತ್ಯವನ್ನು ಒತ್ತಿ ಹೇಳಿದ್ದಾರೆ. ಉಪಮುಖ್ಯಮಂತ್ರಿಗಳು ಹಾಗೂ ಜಲಸಂಪನ್ಮೂಲ ಇಲಾಖೆಯ ಮೇಲಾಧಿಕಾರಿಗಳೊಂದಿಗೆ ಹಲವು ಸುತ್ತಿನ ಚರ್ಚೆಗಳು ನಡೆಸಿದ ಫಲವಾಗಿ, ಯೋಜನೆಗೆ ಅಂತಿಮ ಮನ್ನಣೆ ದೊರಕಿದೆ.

ಈ ಯೋಜನೆಯಿಂದ ಹತ್ತಿಕುಣಿ, ಕಟಗಿ, ಶಹಪುರ, ಹೊನಗೇರಿ, ಯಡ್ಡಳ್ಳಿ, ಬಂದಳ್ಳಿ ಮತ್ತು ದಸರಾಬಾದ್ ಗ್ರಾಮಗಳ ವ್ಯಾಪ್ತಿಯ ಸುಮಾರು 5,400 ಎಕರೆ ಕೃಷಿ ಭೂಮಿಗೆ ಶಾಶ್ವತ ನೀರಾವರಿ ಸೌಲಭ್ಯ ಲಭ್ಯವಾಗಲಿದೆ. ನೀರಿನ ಕೊರತೆಯಿಂದ ಸಂಕಷ್ಟ ಅನುಭವಿಸುತ್ತಿದ್ದ ರೈತರಿಗೆ ಇದು ಜೀವನಾಡಿಯಂತೆ ಪರಿಣಮಿಸುವ ನಿರೀಕ್ಷೆ ವ್ಯಕ್ತವಾಗಿದೆ.

ಕೇಂದ್ರ ಸಚಿವ ವಿ. ಸೋಮಣ್ಣ ಅವರು ಯೋಜನೆಗೆ ವಿಶೇಷ ಕಾಳಜಿ ತೋರಿಸಿ, ಅನುದಾನ ಬಿಡುಗಡೆಗೆ ಅಗತ್ಯ ಬೆಂಬಲ ನೀಡಿರುವುದು ಗಮನಾರ್ಹವಾಗಿದೆ. ಇದೇ ವೇಳೆ, ರಾಜ್ಯದ ಉಪಮುಖ್ಯಮಂತ್ರಿ ಹಾಗೂ ಜಲಸಂಪನ್ಮೂಲ ಸಚಿವರಾದ ಡಿ.ಕೆ. ಶಿವಕುಮಾರ್ ಅವರ ಸಹಕಾರ ಮತ್ತು ಸಕಾರಾತ್ಮಕ ಸ್ಪಂದನೆ ಯೋಜನೆಗೆ ಗತಿ ನೀಡಿದೆ. ತಾಂತ್ರಿಕ ಅಂಶಗಳ ಪರಿಶೀಲನೆಯ ನಂತರ ಯೋಜನೆಯನ್ನು ಸಚಿವ ಸಂಪುಟದ ಮುಂದೆ ಮಂಡಿಸಿ, ಅನುದಾನ ಮಂಜೂರಾಗುವಂತೆ ಮಾಡಿದಲ್ಲಿ ಅವರ ಪಾತ್ರ ಪ್ರಮುಖವಾಗಿದೆ.

ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಸಮನ್ವಯದೊಂದಿಗೆ ಸ್ಥಳೀಯ ಜನಪ್ರತಿನಿಧಿಗಳ ಬದ್ಧತೆ ಫಲವಾಗಿ ಈ ಬೃಹತ್ ಯೋಜನೆ ಅನುಷ್ಠಾನ ಹಂತ ತಲುಪಿದೆ. ಇದರೊಂದಿಗೆ ಪ್ರದೇಶದ ಕೃಷಿ ಚಟುವಟಿಕೆಗಳಿಗೆ ಹೊಸ ಚೈತನ್ಯ ದೊರಕಲಿದ್ದು, ರೈತರ ಆರ್ಥಿಕ ಸ್ಥಿತಿ ಸುಧಾರಣೆಗೆ ಇದು ಪ್ರಮುಖ ಹೆಜ್ಜೆಯಾಗಲಿದೆ.


"ನಮ್ಮ ಕ್ಷೇತ್ರದ ರೈತರ ಭವಿಷ್ಯಕ್ಕೆ ಬೆಳಕು ನೀಡುವಲ್ಲಿ ಕೇಂದ್ರ ಸಚಿವ ವಿ. ಸೋಮಣ್ಣ ಅವರ ಮಾರ್ಗದರ್ಶನ ಅಮೂಲ್ಯವಾಗಿದೆ. ಅವರ ಸಹಕಾರವಿಲ್ಲದೆ ಇಂತಹ ದೊಡ್ಡ ಅನುದಾನ ಸಾಧ್ಯವಾಗುತ್ತಿರಲಿಲ್ಲ. ಕ್ಷೇತ್ರದ ಜನರ ಪರವಾಗಿ ಅವರಿಗೆ ಹೃತ್ಪೂರ್ವಕ ಧನ್ಯವಾದಗಳನ್ನು ಸಲ್ಲಿಸುತ್ತೇನೆ," ಎಂದು ಶಾಸಕ ಶರಣಗೌಡ ಕಂದಕೂರ ತಿಳಿಸಿದ್ದಾರೆ.

# ಹೊರ್ಮುಜ್ ಮುಕ್ತ: ಭಾರತ ನಿರಾಳ

**ಟೆಹ್ರಾನ್, ಏ.18**-ಹೊರ್ಮುಜ್ ಜಲಸಂಧಿಯನ್ನು ಮತ್ತೆ ತೆರೆಯುವ ಇರಾನ್ ನಿರ್ಧಾರದಿಂದ ಭಾರತಕ್ಕೆ ನಿರಾಳ ತರಿಸಿದೆ. ಇದು ತನ್ನ ತೈಲ ಆಮದಿನ ಸುಮಾರು ಶೇ.50% ರಷ್ಟು ಜಲಮಾರ್ಗವನ್ನು ಅವಲಂಬಿಸಿದೆ. ವಿಶೇಷವಾಗಿ ಪಶ್ಚಿಮ ಏಷ್ಯಾ ಸಂಘರ್ಷದಿಂದಾಗಿ ಇಂಧನ ಪೂರೈಕೆಯಲ್ಲಿ ವ್ಯಾಪಕ ಅಡಚಣೆಗೆ ಹೊರ್ಮುಜ್ ಜಲಸಂಧಿ ಕಾರಣವಾಗಿತ್ತು.

ಇರಾನ್ ವಿದೇಶಾಂಗ ಸಚಿವ ಸೈಯದ್ ಅಬ್ಬಾಸ್ ಅರಾಘಚಿ ಅವರು ಇರಾನ್-ಯುಎಸ್ ಕದನ ವಿರಾಮದ ಉಳಿದ ಅವಧಿಗೆ ಮಾನ್ಯವಾಗಲಿರುವ ಈ ನಿರ್ಧಾರವು ಪ್ರಸ್ತುತ ಜಲಸಂಧಿಯ ಪಶ್ಚಿಮದಲ್ಲಿರುವ ಸುಮಾರು 15 ಭಾರತೀಯ ಧ್ವಜ ಮತ್ತು ಒಡೆತನದ ವ್ಯಾಪಾರಿ ಹಡಗುಗಳಿಗೆ ಜಲಮಾರ್ಗವನ್ನು ಹಾದುಹೋಗಲು ಮತ್ತು ದೇಶಕ್ಕೆ ಮರಳಲು ಅನುವು ಮಾಡಿಕೊಡುತ್ತದೆ.

ಫೆಬ್ರವರಿ 28ರಂದು ಪ್ರಾರಂಭವಾದ 50 ದಿನಗಳ ಸಂಘರ್ಷವನ್ನು ಕೊನೆಗೊಳಿಸುವ ಪ್ರಯತ್ನಗಳ ಭಾಗವಾಗಿ ಟೆಹ್ರಾನ್ ಮತ್ತು ವಾಷಿಂಗ್ಟನ್ ನಡುವೆ ರೂಪಿಸಲಾಗುತ್ತಿರುವ ಪ್ಯಾಕೇಜ್ ನ ಭಾಗವೆಂದು ನಂಬಲಾದ ಇರಾನ್ ಕ್ರಮಕ್ಕೆ ಭಾರತೀಯ ಅಧಿಕಾರಿಗಳಿಂದ ತಕ್ಷಣದ ಪ್ರತಿಕ್ರಿಯೆ ಬಂದಿಲ್ಲ. ಯುಎಸ್, ಇರಾನ್ ಮತ್ತು ಪಶ್ಚಿಮ ಏಷ್ಯಾದ ದೇಶಗಳ ನಾಯಕರೊಂದಿಗಿನ ಇತ್ತೀಚಿನ ಸಂವಾದದ ಸಮಯದಲ್ಲಿ ಭಾರತದ ನಾಯಕತ್ವವು ಅಡೆತಡೆಯಿಲ್ಲದ ಮತ್ತು ಸುರಕ್ಷಿತ ವ್ಯಾಪಾರ ಮತ್ತು ವ್ಯಾಪಾರಿ ಹಡಗುಗಳ ಸಾಗಣೆಯನ್ನು ಖಚಿತಪಡಿಸಿಕೊಳ್ಳಲು ಜಲಸಂಧಿಯನ್ನು ಪುನಃ ತೆರೆಯುವ ಮಹತ್ವವನ್ನು ಒತ್ತಿಹೇಳಿತು.



ಇರಾನ್ ನ ನಿರ್ಧಾರವು ಕಚ್ಚಾ ತೈಲದ ಬೆಲೆಯಲ್ಲಿ ತೀವ್ರ ಕುಸಿತಕ್ಕೆ ಕಾರಣವಾಗಿದೆ. ಇದು ಭಾರತಕ್ಕೆ ಸ್ವಾಗತಾರ್ಹ ಬೆಳವಣಿಗೆಯಾಗಿದೆ. ಇದು ಸಂಘರ್ಷದ ಮೊದಲು ಬ್ರೆಂಟ್ ಕಚ್ಚಾ ತೈಲವು ಬ್ಯಾರೆಲ್ ಗೆ ಸುಮಾರು 70 ಡಾಲರ್ ನಿಂದ ಮಾರ್ಚ್ ಅಂತ್ಯದಲ್ಲಿ 119 ಡಾಲರ್ ಗೆ ಏರಿತ್ತು. ಅರಾಘ್ಚಿ ಅವರ ಘೋಷಣೆಯ ನಂತರ, ಬ್ರೆಂಟ್ ಕಚ್ಚಾ ತೈಲದ ಬೆಲೆ ಬ್ಯಾರೆಲ್ ಗೆ 90 ಡಾಲರ್ ಗಿಂತ ಕಡಿಮೆಯಾಗಿದೆ.

# ವಿಜಯಪುರದ ಹಿರಿಯ ಪತ್ರಕರ್ತ ಬಾಬುರಾವ ಕುಲಕರ್ಣಿಯವರಿಗೆ ಸನ್ಮಾನ



**ವಿಜಯಪುರ, ಏ.18 :** ಅವಿಭಜಿತ ವಿಜಯಪುರ ಜಿಲ್ಲೆಯ ಐವರು ಪ್ರಾಣದೇವರಾದ ಹಲಗಣಿ, ಯಲಗೂರ, ತುಳಸೀಗಿರಿ, ಅಚನೂರು ಹಾಗೂ ಕೋರವಾರದ ಪ್ರಾಣದೇವರಲ್ಲಿ ಒಬ್ಬರಾದ ಹಲಗಣೇಶನ ಉತ್ಸವದ ಅಂಗವಾಗಿ ನಗರದ ಹಿರಿಯ ಪತ್ರಕರ್ತ ಬಾಬುರಾವ ಕುಲಕರ್ಣಿ ಅವರನ್ನು ಹಲಗಣೇಶ ದೇವಸ್ಥಾನ ಸಮಿತಿ ಅಧ್ಯಕ್ಷ ಗಿರೀಶ ಕುಲಕರ್ಣಿ, ಕಾರ್ಯದರ್ಶಿ ಭೀಮಾಚಾರ್ಯ ಗೋಠೆ ಮೊದಲಾದವರು ಶಾಲು ಹೊದಿಸಿ ಸ್ಮರಣಿಕೆ ನೀಡಿ ಸನ್ಮಾನಿಸಿದರು. ಈ ಸಂದರ್ಭದಲ್ಲಿ ಮುಂಬಯಿಯ ನ್ಯಾಯವಾದಿ ವಿಜಯ ಕುಲಕರ್ಣಿ ಹಾಗೂ ವಿಷ್ಣು ಕುಲಕರ್ಣಿ ಮೊದಲಾದವರು ಉಪಸ್ಥಿತರಿದ್ದರು.

# ನೇಣು ಹಾಕಿಕೊಂಡು ಯುವಕ ಆತ್ಮಹತ್ಯೆ




**ಕಲಬುರಗಿ,ಏ.17**-ಜೇವರ್ಗಿ ರಸ್ತೆಯಲ್ಲಿರುವ ಕಟ್ಟಿಸಂಗಾವಿ ಸೇತುವೆಗೆ ನೇಣು ಬಿಗಿದುಕೊಂಡು ಯುವಕನೋರ್ವ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಶುಕ್ರವಾರ ಬೆಳಿಗ್ಗೆ ನಡೆದಿದೆ.

ಕಲಬುರಗಿ ನಗರದ ಹೊರವಲಯದ ಫರಹತಾಬಾದ್ ಗ್ರಾಮದ ನಿವಾಸಿ ಪ್ರಭುದೇವ ಈಶ್ವರರಾವ್ (32) ಆತ್ಮಹತ್ಯೆ ಮಾಡಿಕೊಂಡಿರುವ ಯುವಕ ಎಂದು ತಿಳಿದುಬಂದಿದೆ.

ಆತ್ಮಹತ್ಯೆ ಮಾಡಿಕೊಂಡಿರುವ ಮಾಹಿತಿ ತಿಳಿದ ತಕ್ಷಣ ಫರಹತಾಬಾದ್ ಠಾಣೆಯ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಫರಹತಾಬಾದ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಎನ್‌ಡಿಎ ಗೆ ಕರಾಳ ದಿನ ಪ್ರಿಯಾಂಕ ಗಾಂಧಿ ತೀವ್ರ ವಾಗ್ದಾಳಿ



**ನವದೆಹಲಿ, ಏ.18:** ಲೋಕಸಭೆಯಲ್ಲಿ ಮಹಿಳಾ ಮೀಸಲು ಮಸೂದೆ ಸೋಲು ಕಂಡ ಬೆನ್ನಲ್ಲೇ ಕಾಂಗ್ರೆಸ್ ನಾಯಕಿ ಪ್ರಿಯಾಂಕ ಗಾಂಧಿ ಎನ್‌ಡಿಎ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ. "ಇದು ಪ್ರಜಾಪ್ರಭುತ್ವದ ದೊಡ್ಡ ಗೆಲುವು, ಎನ್‌ಡಿಎಗೆ ಕರಾಳ ದಿನ" ಎಂದು ಅವರು ಕಿಡಿಕಾರಿದ್ದಾರೆ.

ದೆಹಲಿಯ ಕಾಂಗ್ರೆಸ್ ಮುಖ್ಯ ಕಚೇರಿಯಲ್ಲಿ ಮಾಧ್ಯಮಗೋಷ್ಠಿ ನಡೆಸಿದ ಅವರು, "ನಿನ್ನೆ ನಡೆದದ್ದು ಪ್ರಜಾಪ್ರಭುತ್ವದ ಗೆಲುವು. ಇದು ಪ್ರತಿಪಕ್ಷಗಳ ಏಕತೆಯ ಫಲಿತಾಂಶ" ಎಂದು ಹೇಳಿದರು. ಕೇಂದ್ರದ ಆಡಳಿತ ಪಕ್ಷವು ಅಧಿಕಾರದಲ್ಲೇ ಉಳಿಯಲು ಸಂಚು ರೂಪಿಸಿತ್ತು ಎಂದು ಆರೋಪಿಸಿದ ಅವರು, "ಶಾಶ್ವತವಾಗಿ ಅಧಿಕಾರದಲ್ಲಿರಲು ದೊಡ್ಡ ಮಟ್ಟದ ಯೋಜನೆ ರೂಪಿಸಲಾಗಿತ್ತು" ಎಂದು ಆರೋಪಿಸಿದರು.

ಮಹಿಳಾ ಮೀಸಲು ವಿಚಾರವು ಕೇವಲ ಮಹಿಳೆಯರ ಹಕ್ಕಿನ ವಿಷಯವಲ್ಲ, ಆಡಳಿತದ ಏಕಪಕ್ಷೀಯ ನಡೆಗೆ ಅವಕಾಶ ಕಲ್ಪಿಸುವ ಪ್ರಯತ್ನವಾಗಿತ್ತು ಎಂದು ಅವರು ಅಭಿಪ್ರಾಯಪಟ್ಟರು. "ಮಸೂದೆ ಅಂಗೀಕರಿಸಿದರೂ ಜಯ, ಆಗದಿದ್ದರೂ ಜಯ ಎಂಬ ಲೆಕ್ಕಾಚಾರ ಆಡಳಿತ ಪಕ್ಷಕ್ಕಿತ್ತು. ಆದರೆ ಅದು ಸುಲಭವಲ್ಲ" ಎಂದು ಟೀಕಿಸಿದರು. ಎನ್‌ಡಿಎಗೆ ಇದು ದೊಡ್ಡ ಹೊಡೆತವಾಗಿದ್ದು, ಆಡಳಿತದಲ್ಲಿರುವವರ ಮುಖದಲ್ಲೇ ಅದರ ಪರಿಣಾಮ ಕಂಡುಬರುತ್ತಿದೆ ಎಂದು ಪ್ರಿಯಾಂಕಾ ಗಾಂಧಿ ಹೇಳಿದರು. "ಇದು ಸಂವಿಧಾನದ ಗೆಲುವು ಹಾಗೂ ಪ್ರತಿಪಕ್ಷಗಳ ಏಕತೆಯ ಪ್ರತೀಕ" ಎಂದು ಬಣ್ಣಿಸಿದರು.

ಪ್ರತಿಪಕ್ಷಗಳು ಮಹಿಳಾ ಮೀಸಲಾತಿಗೆ ವಿರೋಧಿಯಲ್ಲ, ಆದರೆ ಸರ್ಕಾರದ ಉದ್ದೇಶವೇ ಅನುಮಾನಾಸ್ಪದ ಎಂದು ಅವರು ಹೇಳಿದರು. "ಇದು ಮಹಿಳಾ ಮೀಸಲಾತಿ ಬಗ್ಗೆ ಅಲ್ಲ ಎಂಬುದು ಈಗ ಸ್ಪಷ್ಟವಾಗಿದೆ" ಎಂದು ಹೇಳಿದರು.
ಹಿಂದಿನ ಘಟನೆಗಳನ್ನು ಉಲ್ಲೇಖಿಸಿದ ಅವರು, "ಉನ್ನಾವೋ, ಹತ್ರಾಸ್ ಪ್ರಕರಣಗಳು, ಮಣಿಪುರದಲ್ಲಿ ಮಹಿಳೆಯರ ಬಗ್ಗೆ ಯಾರು ಮಾತನಾಡಿದರು" ಎಂದು ಪ್ರಶ್ನಿಸಿದರು.
ಸರ್ಕಾರವು 2023ರ ಮಸೂದೆಯನ್ನು ಮತ್ತೆ ತರಬೇಕೆಂದು ಆಗ್ರಹಿಸಿದ ಅವರು, "ನಿಜವಾಗಿಯೂ ಮಹಿಳೆಯರಿಗಾಗಿ ಕೆಲಸ ಮಾಡಬೇಕೆಂದರೆ 2023ರ ಮಸೂದೆಯನ್ನು ಮತ್ತೆ ತರುವುದು. ಅದಕ್ಕೆ ನಾವು ಬೆಂಬಲ ನೀಡುತ್ತೇವೆ" ಎಂದು ಹೇಳಿದರು.
ಪ್ರತಿಪಕ್ಷಗಳ ಏಕತೆ ಮುಂದುವರಿದರೆ ಸರ್ಕಾರದ ವಿರುದ್ಧ ಮತ್ತಷ್ಟು ಬಲಿಷ್ಠ ಹೋರಾಟ ಸಾಧ್ಯವೆಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

ಮಹಿಳೆಯರಿಗೆ 180 ಸ್ಥಾನ ನೀಡಲು ವಿಪಕ್ಷ ಆಗ್ರಹ

ಕೇಂದ್ರ ಸರ್ಕಾರ ಮಂಡಿಸಿದ್ದ ಮಹಿಳಾ ಮೀಸಲಾತಿ ಮಸೂದೆಗೆ ಲೋಕಸಭೆಯಲ್ಲಿ ಸೋಲು ಕಂಡ ಬಳಿಕ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರಕ್ಕೆ ಮಹಿಳಾ ಮೀಸಲಾತಿ ತರುವ ನಿಜವಾದ ಕಾಳಜಿ ಇದ್ದರೆ ಹಾಲಿ ಇರುವ 543 ಸ್ಥಾನಗಳ ಪೈಕಿ 180 ಸ್ಥಾನಗಳನ್ನು ಮಹಿಳೆಯರಿಗೆ ಮೀಸಲಿಡಿ ಎಂದು ವಿರೋಧ ಪಕ್ಷಗಳು ಕೇಂದ್ರ ಸರ್ಕಾರವನ್ನು ಆಗ್ರಹಿಸಿವೆ.

ಲೋಕಸಭಾ ಸ್ಥಾನಗಳಲ್ಲಿ 815ಕ್ಕೆ ಹೆಚ್ಚಿಸಿ ಆ ಬಳಿಕ ಮಹಿಳಾ ಮೀಸಲಾತಿಯನ್ನು ಶೇಕಡಾ 33 ರಷ್ಟು ನೀಡುವ ಬದಲು ಹೀಗಿರುವ ಲೋಕಸಭಾ ಸಂಖ್ಯೆಯಲ್ಲಿ ಮಹಿಳಾ ಮೀಸಲಾತಿ ನೀಡಿ ಮುಂದಿನ ಲೋಕಸಭೆ ಚುನಾವಣೆಯಲ್ಲಿ ಜಾರಿಗೆ ತನ್ನಿ ಎಂದು ವಿರೋಧ ಪಕ್ಷಗಳ ಹಲವು ಸದಸ್ಯರು ಆಗ್ರಹಿಸಿವೆ.
.ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಲೋಕಸಭೆಯಲ್ಲಿ ಮಂಡಿಸಿದ್ದ ನಾರಿಶಕ್ತಿ ವಂದನ್ ಅಧಿನಿಯಮ ಮೂರನೇ ಎರಡಷ್ಟು ಬಹುಮತ ಪಡೆಯಲು ಸಾಧ್ಯವಾಗದೆ ಸೋಲು ಕಂಡಿದೆ, ಈ ಮೂಲಕ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರಕ್ಕೆ ಮೊದಲ ಸೋಲಾಗಿದೆ.
ಸಾಂವಿಧಾನಿಕ ತಿದ್ದುಪಡಿ ಮಸೂದೆಗೆ 298 ಸದಸ್ಯರು ಅದರ ಪರವಾಗಿ ಮತ ಚಲಾಯಿಸಿದರೆ, 230 ಸಂಸದರು ಅದರ ವಿರುದ್ಧ ಮತ ಚಲಾಯಿಸಿದರು. 2014 ರಲ್ಲಿ ಅಧಿಕಾರಕ್ಕೆ ಬಂದ ನಂತರ ಸಾಂವಿಧಾನಿಕ ತಿದ್ದುಪಡಿ ಮಸೂದೆ ಮೊದಲ ಬಾರಿಗೆ ವಿಫಲವಾಗಿದೆ.ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಶಿವಸೇನೆಯ ಮಾಜಿ ರಾಜ್ಯಸಭಾ ಸಂಸದೆ ಪ್ರಿಯಾಂಕಾ ಚತುರ್ವೇದಿ, 2029 ರಲ್ಲಿ ನಡೆಯಲಿರುವ ಮುಂದಿನ ಸಾರ್ವತ್ರಿಕ ಚುನಾವಣೆಗೆ ಲೋಕಸಭೆಯಲ್ಲಿನ ಪ್ರಸ್ತುತ 543 ಸ್ಥಾನಗಳಲ್ಲಿ 180 ಸ್ಥಾನಗಳನ್ನು ಮಹಿಳೆಯರಿಗೆ ಮೀಸಲಿಡಬೇಕು ಎಂದು ಒತ್ತಾಯಿಸಿದ್ದಾರೆ.

ಹಾಲಿ ಇರುವ 543 ರಲ್ಲಿ 180 ಸ್ಥಾನಗಳನ್ನು ಮುಂದಿನ ಲೋಕಸಭಾ ಚುನಾವಣೆಯಲ್ಲಿ ಮಹಿಳೆಯರಿಗೆ ಮೀಸಲಿದ್ದು ಚುನಾವಣೆ ನಡೆಸಿ ಎಂದು ಸವಾಲು ಹಾಕಿದ್ದಾರೆ.
106 ನೇ ಸಂವಿಧಾನ ತಿದ್ದುಪಡಿ ತರುವ ಮೂಲಕ ಹಾಲಿ ಲೋಕಸಭಾ ಸ್ಥಾನಗಳಲ್ಲಿ ಮಹಿಳಾ ಮೀಸಲಾತಿ ಜಾರಿಗೆ ತನ್ನಿ ಎಂದು ಆಗ್ರಹಿಸಿದ್ದಾರೆ.

# ಕೆಲಸದ ವೇಳೆಯಲ್ಲಿ ಯುವಕ ಯುವತಿಯರಿಗೆ ಕಿರುಕುಳ ತಪ್ಪಿಸಲು ಕಟ್ಟುನಿಟ್ಟಿನ ಕ್ರಮಕ್ಕೆ ಒತ್ತಾಯಿಸಿ ಮನವಿ



**ವಿಜಯಪುರ, ಏ. 18:** ಕೆಲಸದ ಸ್ಥಳದಲ್ಲಿ ಹಿಂದು ಯುವಕ–ಯುವತಿಯರಿಗೆ ಕಿರುಕುಳ ಮತ್ತು ಬಲವಂತದ ಧಾರ್ಮಿಕ ಆಚರಣೆಗಳ ವಿರುದ್ಧ ಜಿಲ್ಲೆಯಲ್ಲಿಯೂ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕೆಂದು ಒತ್ತಾಯಿಸಿ ಹಿಂದು ಮುಖಂಡರು ಜಿಲ್ಲಾಧಿಕಾರಿ ಮೂಲಕ ಶುಕ್ರವಾರ ಸರ್ಕಾರಕ್ಕೆ ಮನವಿ ಸಲ್ಲಿಸಲಾಯಿತು.
ಮಹಾರಾಷ್ಟ್ರದ ನಾಶಿಕ್ ನಗರದಿಂದ ಪ್ರತಿಷ್ಠಿತ ಬಹುರಾಷ್ಟ್ರೀಯ ಖಿಅಖ ಕಂಪನಿಯಲ್ಲಿ ಇತ್ತೀಚೆಗೆ ಬಂದ ವರದಿಗಳು ಕೆಲಸದ ಸ್ಥಳಗಳಲ್ಲಿ ಕಿರುಕುಳ ಹಾಗೂ ಖ್ಯಾತ ಸಂಸ್ಥೆಗಳ ಒಳಗೆ ನಡೆಯುತ್ತಿರುವಂತೆ ಹೇಳಲಾಗಿರುವ ಬಲವಂತದ ಧಾರ್ಮಿಕ ಆಚರಣೆಗಳ ಕುರಿತು ಗಂಭೀರ ಆತಂಕವನ್ನು ಉಂಟುಮಾಡಿವೆ. ಇಂತಹ ಘಟನೆಗಳು ನಡೆಯದಂತೆ ನಿರಂತರ ಎಚ್ಚರಿಕೆ ಮತ್ತು ಮುನ್ನೆಚ್ಚರಿಕೆ ಕ್ರಮಗಳ ಅಗತ್ಯತೆ ಇದೆ. ವಿಜಯಪುರ ಜಿಲ್ಲೆಯಲ್ಲಿಯೂ ಇಂಥ ಘಟನೆಗಳು ನಡೆಯದಂತೆ ಕ್ರಮ ಕೈಗೊಳ್ಳಬೇಕು ಎಂದು ಹಿಂದೂ ಮುಖಂಡ ದಯಾಸಾಗರ ಪಾಟೀಲ್ ಸರ್ಕಾರವನ್ನು ಒತ್ತಾಯಿಸಿದರು.

ವಿಜಯಪುರ ಜಿಲ್ಲೆಯಲ್ಲಿ ವಿವಿಧ ಸಮುದಾಯಗಳು ಮತ್ತು ಹಿನ್ನೆಲೆಯಿಂದ ಬಂದ ಉದ್ಯೋಗಿಗಳನ್ನು ಹೊಂದಿರುವ ಅನೇಕ ಶಿಕ್ಷಣ ಸಂಸ್ಥೆಗಳು, ಆರೋಗ್ಯ ಸೇವಾ ಕೇಂದ್ರಗಳು, ತರಬೇತಿ ಸಂಸ್ಥೆಗಳು ಹಾಗೂ ಸಣ್ಣ ಕೈಗಾರಿಕೆಗಳಿವೆ. ಎಲ್ಲ ಉದ್ಯೋಗಿಗಳಿಗೆ ಸುರಕ್ಷಿತ, ಗೌರವಯುತ ಮತ್ತು ಕಾನೂನುಬದ್ಧ ಕೆಲಸದ ವಾತಾವರಣವನ್ನು ಖಚಿತಪಡಿಸುವುದು ಅತ್ಯಂತ ಮುಖ್ಯವಾಗಿದೆ ಎಂದು ಹೇಳಿದರು.

ಈ ಹಿನ್ನೆಲೆಗಳಲ್ಲಿ, ಜಿಲ್ಲಾಡಳಿತವು
ಕೆಲಸದ ಸ್ಥಳಗಳಲ್ಲಿ ಸಿಸಿಟಿವಿ ಕ್ಯಾಮೆರಾ ಮುಂತಾದ ಸರಿಯಾದ ನಿಗಾ ವ್ಯವಸ್ಥೆಯನ್ನು ಖಚಿತಪಡಿಸುವುದು,
ಉದ್ಯೋಗಿಗಳ ಹಕ್ಕುಗಳು ಹಾಗೂ ದೂರು ಪರಿಹಾರ ವ್ಯವಸ್ಥೆಗಳ ಕುರಿತು ಜಾಗೃತಿ ಮೂಡಿಸುವುದು,
ಕಿರುಕುಳ ಮತ್ತು ಯಾವುದೇ ಬಲವಂತದ ವಿರುದ್ಧ ಕಠಿಣ ನೀತಿಗಳನ್ನು ಸಂಸ್ಥೆಗಳು ಅಳವಡಿಸಿಕೊಳ್ಳುವಂತೆ ಪ್ರೋತ್ಸಾಹಿಸುವುದು,
ಇಂತಹ ದೂರುಗಳ ಬಗ್ಗೆ ಸ್ಥಳೀಯ ಅಧಿಕಾರಿಗಳು ಎಚ್ಚರಿಕೆಯಿಂದ ಹಾಗೂ ತ್ವರಿತವಾಗಿ ಪ್ರತಿಕ್ರಿಯಿಸುವಂತೆ ಸೂಚಿಸುವುದು,
ತ್ವರಿತವಾಗಿ ಸ್ಪಂದಿಸಲು ಸಹಾಯವಾಣಿ(Helpline) ಸಂಖ್ಯೆಯನ್ನು ಪ್ರಕಟಿಸುವದು.

ಈ ಕ್ರಮಗಳು ಸಮಾಜದಲ್ಲಿ ಸೌಹಾರ್ದತೆ ಕಾಪಾಡಲು, ವೈಯಕ್ತಿಕ ಸ್ವಾತಂತ್ರಗಳನ್ನು ರಕ್ಷಿಸಲು ಮತ್ತು ಕಾನೂನು ಸುವ್ಯವಸ್ಥೆಯನ್ನು ಉಳಿಸಲು ಸಹಕಾರಿಯಾಗುತ್ತವೆ.

ಈ ವಿಷಯವನ್ನು ದಯವಿಟ್ಟು ಪರಿಗಣಿಸಿ, ಅಗತ್ಯವಾದ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳುವಂತೆ ಪಾಟೀಲ ವಿನಂತಿಸಿದರು.

# ಸ್ಟುಡಿಯೋ ಟೂರ್ ಕಾರ್ಯಗಾರದಲ್ಲಿ ಮಾಧ್ಯಮ ಕ್ಷೇತ್ರದ ಅವಕಾಶಗಳ ಕುರಿತು ಜಾಗೃತಿ




**ವಿಜಯಪುರ, ಏ18:** ಮಾಧ್ಯಮ ಕ್ಷೇತ್ರದಲ್ಲಿ ವಿಪುಲ ಅವಕಾಶಗಳಿದ್ದು, ಅವುಗಳನ್ನು ಸಮರ್ಪಕವಾಗಿ ಬಳಸಿಕೊಂಡು ವಿದ್ಯಾರ್ಥಿಗಳು ತಮ್ಮ ವೃತ್ತಿ ಬದುಕನ್ನು ಕಟ್ಟಿಕೊಳ್ಳಬೇಕು ಎಂದು ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ಮುಖ್ಯಸ್ಥ ಪ್ರೊ. ಓಂಕಾರ ಕಾಕಡೆ ಹೇಳಿದರು.
ನಗರದ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ಪತ್ರಿಕೋದ್ಯಮ ಮತ್ತು ಸಂವಹನ ವಿಭಾಗದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಒಂದು ದಿನದ "ಸ್ಟುಡಿಯೋ ಟೂರ್" ಮತ್ತು ಟಿವಿ ಆಂಕರಿಂಗ್ ಕಾರ್ಯಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.
ಪತ್ರಿಕೋದ್ಯಮವು ವೃತ್ತಿ ಜೀವನವನ್ನು ರೂಪಿಸಿಕೊಳ್ಳಲು ಅಗತ್ಯವಾದ ವಿವಿಧ ಕೌಶಲ್ಯಗಳನ್ನು ನೀಡುತ್ತದೆ. ಈ ಕ್ಷೇತ್ರವನ್ನು ಆಯ್ಕೆ ಮಾಡಿಕೊಳ್ಳುವುದರಿಂದ ವ್ಯಕ್ತಿಗತ ಬೆಳವಣಿಗೆಯ ಜೊತೆಗೆ ಸಮಾಜದ ಅಭಿವೃದ್ಧಿಗೂ ಸಹಕಾರಿಯಾಗುತ್ತದೆ. ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ಕೋರ್ಸಗಳನ್ನು ಆಯ್ಕೆ ಮಾಡುವಾಗ ಬೇರೆಯವರ ಮೇಲೆ ಅವಲಂಬಿತರಾಗದೇ, ತಮ್ಮ ಸಾಮರ್ಥ್ಯ ಮತ್ತು ಸ್ಪಷ್ಟ ಗುರಿಗಳನ್ನು ಗಮನದಲ್ಲಿಟ್ಟುಕೊಂಡು ಉತ್ತಮ ಆಯ್ಕೆ ಮಾಡಿಕೊಳ್ಳಬೇಕು ಎಂದು ಹೇಳಿದರು.
ಇದೇ ಸಂದರ್ಭದಲ್ಲಿ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ.ಸಂದೀಪ್ ಮಾತನಾಡಿ, ಇಂದಿನ ದಿನಗಳಲ್ಲಿ ಪ್ರತಿಯೊಬ್ಬರೂ ಸುದ್ದಿಗಳನ್ನು ಓದುವ ಅಭ್ಯಾಸವನ್ನು ಬೆಳೆಸಿಕೊಳ್ಳುವುದು ಅಗತ್ಯವೆಂದು ಹೇಳಿದರು. ಟಿವಿ ಸ್ಟುಡಿಯೋದಲ್ಲಿ ನಡೆಯುವ ಕಾರ್ಯವೈಖರಿ ಹಾಗೂ ಸುದ್ದಿ ಸಂಗ್ರಹಣೆಯಿಂದ ಹಿಡಿದು ಪ್ರಸಾರವಾಗುವ ಹಂತಗಳ ಕುರಿತು ವಿವರಿಸಿದರು.
ಕಾರ್ಯಕ್ರಮದಲ್ಲಿ ವಿಭಾಗದ ಸಹಾಯಕ ಪ್ರಾಧ್ಯಾಪಕಿ ಡಾ.ತಹಮೀನಾ ಕೋಲಾರ, ಕೊಪ್ಪಳ ಹಾಗೂ ಕನಕಗಿರಿ ಸ್ನಾತಕ ವಿದ್ಯಾರ್ಥಿನಿಯರು, ಅತಿಥಿ ಉಪನ್ಯಾಸಕಿ ಹುಲಿಗೆಮ್ಮ, ವಿಭಾಗದ ಅತಿಥಿ ಉಪನ್ಯಾಸಕಿ ಸುಷ್ಮಾ ಪವಾರ, ಸಂಶೋಧನಾ ವಿದ್ಯಾರ್ಥಿನಿಯರು, ಸ್ನಾತಕ ಹಾಗೂ ಸ್ನಾತಕೋತ್ತರ ವಿದ್ಯಾರ್ಥಿನಿಯರು, ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು ಉಪಸ್ಥಿತರಿದ್ದರು.
ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ. ಸಂದೀಪ್ ಅತಿಥಿಗಳನ್ನು ಸ್ವಾಗತಿಸಿ, ಕಾರ್ಯಕ್ರಮವನ್ನು ನಿರೂಪಿಸಿ, ವಂದಿಸಿದರು.

# ಇಂದು ಬಸವಜ್ಯೋತಿ ಪಾದಯಾತ್ರೆ



**ವಿಜಯಪುರ, ಏ. 18:** ಸಮಾನತೆಯ ಹರಿಕಾರ, ಕರ್ನಾಟಕದ ಸಾಂಸ್ಕೃತಿಕ ನಾಯಕ ಬಸಣ್ಣನವರ ಜಯಂತಿ ನಿಮಿತ್ತ ಜನ್ಮಸ್ಥಳ ಬಾಗೇವಾಡಿಯಿಂದ ವಿಜಯಪುರದವರೆಗೆ ವಿಜಯಪುರ ಸ್ಕೈಕ್ಲಿಂಗ್ ಗ್ರುಪ್ ಸಹಯೋಗದಲ್ಲಿ ಬಸವಜ್ಯೋತಿ ಪಾದಯಾತ್ರೆ ಏ.19 ರಂದು ರಾತ್ರಿ 7ಗಂಟೆಗೆ ಆರಂಭಿಸಲಾಗುವುದು ಎಂದು ಆಯೋಜಕ ಬಿ.ಬಿ.ಪಾಟೀಲ ತಿಳಿಸಿದರು.
ವಿಜಯಪುರದಲ್ಲಿ ಬಸವಜ್ಯೋತಿ ಪಾದಯಾತ್ರೆ ನಿಮಿತ್ತ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಈ ಬಾರಿ ವಿಶಿಷ್ಟ ರೀತಿಯಲ್ಲಿ ಬಸವ ಜಯಂತಿ ಆಚರಿಸಲಾಗುವುದು. ಬಸವಣ್ಣನವರ ಜನ್ಮಸ್ಥಳ ಬಸವನ ಬಾಗೇವಾಡಿಯಲ್ಲಿ ಪಾದಯಾತ್ರಿಗಳು ಸಂಜೆ 6ಗಂಟೆಗೆ ಹಾಜರಿರುವುದು. 6.30ಗಂಟೆಗೆ ಪೂಜೆ ಸಲ್ಲಿಸಿದ ನಂತರ ರಾತ್ರಿ.7ಗಂಟೆಗೆ ಬಸವಜ್ಯೋತಿ ಪಾದಯಾತ್ರೆಗೆ ಬಸವನ ಬಾಗೇವಾಡಿ ವಿರಕ್ತಮಠದ ಪ.ಪೂ ಸಿದ್ದಲಿಂಗ ಸ್ವಾಮೀಜಿ ಚಾಲನೆ ನೀಡಲಿದ್ದಾರೆ.
ಈ ಯಾತ್ರೆ ಮಸಬಿನಾಳ, ಉಕ್ಕಲಿ, ಉಕುಮನಾಳ ಮಾರ್ಗವಾಗಿ ಶಿವಗಿರಿ ತಲುಪಲಿದೆ. ನಂತರ ನಗರದ ಬಸವೇಶ್ವರ ವೃತ್ತದಲ್ಲಿ ಮುಕ್ತಾಯಗೊಳ್ಳಲಿದೆ. 50ಕಿ.ಮೀ ಮಾರ್ಗದೂದ್ದಕ್ಕೂ ಪಾದಯಾತ್ರಿಗಳಿಗೆ ಅಲ್ಪೋಪಹಾರ ಮತ್ತು ಲಘುಪಾನಿಯ ವ್ಯವಸ್ಥೆ ಕಲ್ಪಿಸಲಾಗುವುದು ಎಂದು ಅವರು ತಿಳಿಸಿದರು.
ಸ್ವಯಂ ಪ್ರೇರಿತರಾಗಿ 150ಕ್ಕೂ ಹೆಚ್ಚು ಬಸವಾನುಯಾಯಿಗಳು ನೋಂದಣಿ ಮಾಡಿಕೊಂಡಿದ್ದು ಪಾದಯಾತ್ರೆಯಲ್ಲಿ ಭಾಗವಹಿಸಿದವರಿಗೆ ಟಿ–ಶರ್ಟ್, ಪದಕ ಮತ್ತು ಪ್ರಮಾಣ ಪತ್ರ ನೀಡಲಾಗುವುದು ಎಂದು ಆಯೋಜಕ ಬಿ.ಬಿ. ಪಾಟೀಲ ತಿಳಿಸಿದರು.
ಈ ಸಂದರ್ಭದಲ್ಲಿ ಕೋಟಿವೃಕ್ಷ ಅಭಿಯಾನ ಸಂಚಾಲಕ ಡಾ.ಮುರುಗೇಶ ಪಟ್ಟಣಶೆಟ್ಟಿ, ವಿಸಿಜಿ ಉಪಾಧ್ಯಕ್ಷ ಶಿವನಗೌಡ ಪಾಟೀಲ, ಕಾರ್ಯದರ್ಶಿ ಸೋಮಶೇಖರ ಸ್ವಾಮಿ, ಸದಸ್ಯರಾದ ಶಾಂತೇಶ ಕಳಸಗೊಂಡ, ಸಂತೋಷ ಔರಸಂಗ, ಡಾ.ರಾಜು ಯಲಗೊಂಡ, ಶಂಭು ಕರ್ಪೂರಮಠ, ಡಿ.ಕೆ.ತಾವಸೆ, ಗುರುಶಾಂತ ಕಾಪಸೆ, ಅಶ್ಪಾಕ ಮನಗೂಳಿ, ಸಿದ್ದು ನಾಯ್ಕೋಡಿ, ಸೋಮು ಮಠ, ವಿಜಯಕುಮಾರ ಕೋರೆ, ಅಮೀತ ಬಿರಾದಾರ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಹಿಂದಿ ಭಾಷಾ ಸಾರಥ್ಯ ರಮೇಶ ಪಾಟೀಲ್ ಸೊಲಪೂರ



**ಬೀದರ್:ಏ.18:** ಕೇಂದ್ರ ಸರ್ಕಾರದಿಂದ ರಚಿಸಿರುವ ಹಿಂದಿ ಪ್ರಚಾರ ಸಮಿತಿಗೆ ಆಯೀಕೆ ಆಗಿರುವ ಬೀದರ ಜಿಲೆಯ ಸೊಲಪೊರ ಗ್ರಾಮದ ರಮೇಶ್ ಪಾಟೀಲ್ ಸೋಲಪುರ್ ಜಿಲ್ಲಾಧ್ಯಕ್ಷರು ಜೆಡಿಎಸ್ ಆಯ್ಕೆಯಾಗಿದ್ದು ಗ್ರಾಮಸ್ಥರಿಗೆ ಸಂತಸ ತಂದಿದೆ. ಗ್ರಾಮದ ಪುಣ್ಯಕೋಟಿ ಗೆಳೆಯರ ಬಳಗ ವತಿಯಿಂದ ರಮೇಶ್ ಪಾಟೀಲಗೆ ಸನ್ಮಾನಿಸಿದರು ಈ ಸಂದರ್ಭದಲ್ಲಿ ಮಾತನಾಡಿದ ಶ್ರೀಕಾಂತ ಸ್ವಾಮಿ ಸೋಲಪುರ್ ಅವರು ರಮೇಶ್ ಪಾಟಿಲ್ ಅವರು ಪ್ರಸ್ತುತ ಜಿಲ್ಲಾಧ್ಯಕ್ಷರಾಗಿ ಜೆಡಿಎಸ್ ಪಕ್ಷದಲ್ಲಿ ಪ್ರಮಾಣಿಕ ಹಾಗೂ ನಿಷ್ಠಾವಂತ ಕಾರ್ಯಕರ್ತರಾಗಿ ಸೇವಿ ಸಲ್ಲಿಸಿ ಅವರ ಸೇವೆಯನ್ನು ಪರಿಗಣಿಸಿ ಕೇಂದ್ರ ಸರ್ಕಾರದ ಉಕ್ಕು ಮಂತ್ರಾಲಯ ವತಿಯಿಂದ ಹಿಂದಿ ಪ್ರಚಾರ ಹಾಗೂ ಪ್ರಸಾರ ಸಮಿತಿಗೆ ಆಯ್ಕೆಯಾಗಿರುವುದು ಗ್ರಾಮಸ್ಥರಿಗೆ ಸಂತಸ ತಂದಿದೆ. ಇವರ ರಾಜಕೀಯ ಜೀವನದ ಉದ್ದಗಲಕ್ಕೂ ಯಾವುದೇ ಕಪ್ಪು ಚುಕ್ಕಿ ಇಲ್ಲದೆ ಜೀವನ ಸಾಗಿಸಿದ್ದು ಗ್ರಾಮಕ್ಕೆ ಹೆಮ್ಮೆಯ ಗರಿ. ಸೊಲಪೂರ ಒಂದು ಚಿಕ್ಕ ಗ್ರಾಮ ಆಗಿದ್ದು ರಮೇಶ್ ಪಟೇಲ್ ಅವರ ರಾಜಕೀಯ ಸಂಪರ್ಕದ ವತಿಯಿಂದ ನಮ್ಮ ಗ್ರಾಮಕ್ಕೆ ರಾಷ್ಟದ ಮಾಜಿ ಪ್ರಧಾನಿ ದೇವೇಗೌಡರು ನಮ್ಮ ಗ್ರಾಮಕ್ಕೆ ಆಗಮಿಸಿ ನಮ್ಮ ಗ್ರಾಮದ ಹೆಮ್ಮೆ. ಅದೇ ರೀತಿಯಾಗಿ ಕರ್ನಾಟಕ ರಾಜ್ಯದ ಮಾಜಿ ಮುಖ್ಯಮಂತ್ರಿಗಳಾಗಿರುವ ಎಚ್ ಡಿ ಕುಮಾರಸ್ವಾಮಿ ಅವರು ಕೂಡ ನಮ್ಮ ಗ್ರಾಮಕ್ಕೆ ಆಗಮಿಸಿದ್ದು ನಮ್ಮ ಗ್ರಾಮಕ್ಕೆ ಅತ್ಯಂತ ಹೆಮ್ಮೆಯ ವಿಷಯ, ಈಗ ಪ್ರಸ್ತುತ ಕೇಂದ್ರ ಸರ್ಕಾರದಲ್ಲಿ ಬೃಹತ್ ಕೈಗಾರಿಕಾ ಹಾಗೂ ಉಕ್ಕು ಕೇಂದ್ರ ಮಂತ್ರಿಗಳಾಗಿರು ವಂತ ಎಚ್ ಡಿ ಕುಮಾರಸ್ವಾಮಿ ಅವರ ನೇತೃತ್ವದಲ್ಲಿ ರಮೇಶ್ ಪಟೇಲ್ ಸೊಲಪೂರ ಅವರಿಗೆ ಹಿಂದಿ ಪ್ರಚಾರ ಹಾಗೂ ಪ್ರಸಾರ ಸಮಿತಿಯ ಸದಸ್ಯರಾಗಿ ಆಯ್ಕೆ ಮಾಡಿರುವುದು ಗ್ರಾಮಕ್ಕೆ ಖುಷಿ ತಂದಿದೆ ಎಂದು ಹೇಳಿದರು. ತಮ್ಮ ಸಾಧನೆಯಿಂದ ನಮ್ಮ ಗ್ರಾಮದ ಯುವಕರು ಕೂಡ ಸಾಮಾಜಿಕವಾಗಿ ಶೈಕ್ಷಣಿಕವಾಗಿ ರಾಜಕೀಯವಾಗಿ ಇನ್ನೂ ಉತ್ತಮವಾಗಿ ಬೆಳೆಯಲ್ಲಿ ಎಂದು ಸಭೆಯಲ್ಲಿ ಹೇಳಿದರು. ಈ ಸಂದರ್ಭದಲ್ಲಿ ಗ್ರಾಮದ ಸಂಘಶೆಟ್ಟಿ ಖೆಳಗೆ ಸಿದ್ದಪ್ಪಾ ಖೆಳಗೆ, ರಾಜಕುಮಾರ್ ಮಡಿವಾಳ ನರಸಪ್ಪ ಜಟ್ನೂರ್, ಶಿವಕುಮಾರ್ ಶಿವಕುಮಾರ್ ಮೇತ್ರೆ, ಗುಂಡಪ್ಪ ಬಿರಾದರ್ ಉಪಸ್ಥಿತರಿದ್ದರು ಪುಣ್ಯಕೋಟಿ ಗೆಳೆಯರ ಬಳಗದಿಂದ ಸನ್ಮಾನಿಸಲಾಯಿತು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
6360866626

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE